ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 52 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಮಂಗಳವಾರ ದಿನಾಂಕ : 01-09-2026 ಪುಟ : 04 ಬೆಲೆ : 2-00

## ರಾಜ್ಯದಲ್ಲಿ ಆಗಸ್ಟ್ ತಿಂಗಳ ಅನ್ನಭಾಗ್ಯ ಅಕ್ಕಿಗೆ ಬ್ರೇಕ್



ಬೆಂಗಳೂರು: ರಾಜ್ಯದಲ್ಲಿ ಆಗಸ್ಟ್ ತಿಂಗಳ ಅನ್ನಭಾಗ್ಯ ಅಕ್ಕಿಗೆ ವಿತರಣೆಗೆ ಬ್ರೇಕ್ ಹಾಕಲಾಗಿದೆ. ಈ ತಿಂಗಳ ಪಡಿತರ ವಿತರಣೆ ಆಗುತ್ತಿಲ್ಲ.

ರಾಜ್ಯ ಸರ್ಕಾರದಿಂದ 10 ಕೆಜಿ ಅಕ್ಕಿ ವಿತರಣೆ ಮಾಡಲಾಗುತ್ತಿತ್ತು. ಆದರೆ, ಈ ತಿಂಗಳು ಕೇಂದ್ರ ಸರ್ಕಾರದ ಪಾಲಿನ 4 ಕೆಜಿ ಅಕ್ಕಿ, 6 ಕೆಜಿ ರಾಗಿ ವಿತರಣೆ ಮಾಡಲಾಗುತ್ತಿದೆ. ರಾಜ್ಯ ಸರ್ಕಾರ ಅನ್ನಭಾಗ್ಯ ಯೋಜನೆ ಅಡಿ ಯಾಕೆ ಅಕ್ಕಿ ವಿತರಣೆ ಎನ್ನುವುದು ಪ್ರಶ್ನೆ ಆಗಿದೆ.

ಮಲ್ಲೇಶ್ವರಂನ ನ್ಯಾಯಬೆಲೆ ಅಂಗಡಿಯಲ್ಲಿ ಕೇಂದ್ರ ಸರ್ಕಾರದ ಪಾಲಿನ 4 ಕೆಜಿ ಅಕ್ಕಿ ಮತ್ತು 6 ಕೆಜಿ ರಾಗಿ ವಿತರಣೆ ಮಾಡಲಾಗುತ್ತಿದೆ. ಮುಂದಿನ ತಿಂಗಳು ಅನ್ನಭಾಗ್ಯದ 10 ಕೆಜಿ ಅಕ್ಕಿ ವಿತರಣೆ ಆಗಲಿದೆ ಎಂದು ನ್ಯಾಯಬೆಲೆ ಅಂಗಡಿ ಮಾಲೀಕರು ತಿಳಿಸಿದ್ದಾರೆ.

## ಬಿಷ್ಕೆಕ್‌ನಲ್ಲಿ ಪ್ರಧಾನಿ ಮೋದಿ & ಇರಾನ್ ಅಧ್ಯಕ್ಷ ಇಂದು ಭೇಟಿ



ಬಿಷ್ಕೆಕ್: ಭಾರತದ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬಿಷ್ಕೆಕ್‌ನಲ್ಲಿ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ.

ಈ ವರ್ಷದ ಆರಂಭದಲ್ಲಿ ಪಶ್ಚಿಮ ಏಷ್ಯಾದಲ್ಲಿ ವಿನಾಶಕಾರಿ ಯುದ್ಧ ಭುಗಿಲೆದ್ದ ನಂತರ ಉಭಯ ದೇಶಗಳ ನಾಯಕ ಮೊದಲ ಮುಖಾಮುಖಿ ಸಭೆ ಇದಾಗಿದೆ.

ಕಿರ್ಗಿಸ್ತಾನ್ ರಾಜಧಾನಿಯಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಗೆ ಮುಂಚಿತವಾಗಿ ಈ ದ್ವಿಪಕ್ಷೀಯ ಮಾತುಕತೆ ನಡೆಯಲಿದೆ. ಪೆಜೆಶ್ಕಿಯಾನ್ ಅಧಿಕಾರ ವಹಿಸಿಕೊಂಡ ಬಳಿಕ, 2024ರ ಅಕ್ಟೋಬರ್‌ನಲ್ಲಿ ರಷ್ಯಾದ ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯ ಸಮಯದಲ್ಲಿ ಇಬ್ಬರು ನಾಯಕರು ಕೊನೆ

2ನೇ ಪುಟಕ್ಕೆ...

## ತಮಿಳುನಾಡು ವಾದಕ್ಕೆ ಸುಪ್ರೀಂ ಕೋರ್ಟ್ ಆಕ್ಷೇಪ



ನವದೆಹಲಿ: ಕಾವೇರಿ ನೀರು ಹರಿಸುವ ವಿಚಾರವಾಗಿ ತಮಿಳುನಾಡು ವಾದಕ್ಕೆ ಸುಪ್ರೀಂ ಕೋರ್ಟ್ ಆಕ್ಷೇಪ ವ್ಯಕ್ತಪಡಿಸುತ್ತಿದೆ.

ಸುಪ್ರೀಂ ಕೋರ್ಟ್ ನ್ಯಾ. ವಿಕ್ರಮನಾಥ್ ನೇತೃತ್ವದ ಪೀಠದಲ್ಲಿ ಇಂದು ಕಾವೇರಿ ಅರ್ಜಿ ವಿಚಾರಣೆ ನಡೆಯಿತು. ಈ ವೇಳೆ ವಾದ ಮಂಡಿಸಿದ ಕರ್ನಾಟಕ, ಸಿಡಬ್ಲ್ಯೂಎಂಎ ಆದೇಶದ ಪ್ರಕಾರ ನೀರು ಹರಿಸಲಾಗುತ್ತಿದೆ. ಅಗತ್ಯಕ್ಕಿಂತ ಹೆಚ್ಚು ನೀರು ಹರಿಯುತ್ತಿದೆ. ಅಘಓಂ ನಿಗದಿಪಡಿಸಿದ್ದಕ್ಕಿಂತ ಅಧಿಕ ನೀರು ಹರಿದಿದೆ. ಕರ್ನಾಟಕ ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಹಲವು ಪ್ರದೇಶಗಳನ್ನು ಬರಪೀಡಿತ ಎಂದು ಘೋಷಿಸಿದೆ ಎಂದು ತಿಳಿಸಿತು. ತಮಿಳುನಾಡು ವಾದಿಸಿ, ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಜಲಾಶಯಗಳು ತುಂಬುತ್ತಿದೆ. ನಮಗೆ ಸಮರ್ಪಕವಾಗಿ ನೀರು ಹರಿಸುತ್ತಿಲ್ಲ. 35 ಟಿಎಂಸಿ ನೀರು ನಮಗೆ ಬರಬೇಕಿತ್ತು. ಅಷ್ಟು ನೀರು ಹರಿಸಿಲ್ಲ. ಬಾಕಿ ಉಳಿಸಿಕೊಂಡ ನೀರು ಹರಿಸಬೇಕು ಎಂದು ಹೇಳಿತು.

ತಮಿಳುನಾಡು ವಾದಕ್ಕೆ ಸುಪ್ರೀಂ ಕೋರ್ಟ್

2ನೇ ಪುಟಕ್ಕೆ...

# ಜನರಿಗೆ ಮಂಕುಬೂದಿ ಎರಚುವ ಕೆಲಸ ಮಾಡಬೇಡಿ: ಡಿಸಿಎಂ ಪರಂ ಕೆಂಡಾಮಂಡಲ

ತುಮಕೂರು: ಸೆಪ್ಟಂಬರ್ 1 ರಿಂದ ಕಾಂಗ್ರೆಸ್ ಸರ್ಕಾರದ ವಿರುದ್ಧ ಪಾದಯಾತ್ರೆ ನಡೆಸಲು ಉದ್ದೇಶಿಸಿರುವ ಬಿಜೆಪಿ ವಿರುದ್ಧ ಡಿಸಿಎಂ ಜಿ ಪರಮೇಶ್ವರ್ ಹರಿಹಾಯ್ದಿದ್ದಾರೆ.

ರಾಜ್ಯ ಸರಕಾರದ ಹಲವು ವೈಫಲ್ಯಗಳನ್ನು ಮುಂದಿಟ್ಟುಕೊಂಡು ಸೆ.1ರಿಂದ ಲಿಂಗಸುಗೂರಿನಿಂದ ಬಿಜೆಪಿ ಪಾದಯಾತ್ರೆ ನಡೆಸಲಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿಗ ಅವರು , ವಿರೋಧ ಪಕ್ಷವು ಪಾದಯಾತ್ರೆ ಕೈಗೊಳ್ಳಲು ಸ್ವತಂತ್ರವಾಗಿದೆ.

ಆದರೆ ವಿಧಾನಸಭೆಯಲ್ಲಿ ಸರ್ಕಾರದ ವೈಫಲ್ಯದ ಆರೋಪಗಳನ್ನು ಪ್ರಶ್ನೆ ಎತ್ತಬೇಕು, ಅದನ್ನು ಬಿಟ್ಟು ಬೀದಿಯಲ್ಲಿ ಮಾಡಿದರೆ ಏನು ಮಾಡೋಕಾಗುತ್ತೆ ಎಂದರು. ಅವರು ಪಾದಯಾತ್ರೆ ಮಾಡಲಿ ಆದರೆ ಯಾವ ವೈಫಲ್ಯ? ಎಂಬುದನ್ನು ಅವರು ವಿಧಾನಸಭೆಯಲ್ಲಿ ಹೇಳಬೇಕು. ಅವರು ಮಾಡಲಿ. ನಾವು ಅವರಿಗೆ ಅದನ್ನು ಮಾಡಬೇಡಿ ಎಂದು ಹೇಳಿದ್ದೇವೆಯೇ? ಅವರು ಸ್ವತಃ ನಿರ್ಧರಿಸಿದ್ದಾರೆ ಅವರು ಅದನ್ನು ಮಾಡಲಿ ಬಿಡಿ. ಸರಿಯಾಗಿ ಅರ್ಥಮಾಡಿಕೊಳ್ಳದೆ, ಅವರು ಜನರಿಗೆ ಮಂಕು ಬೂದಿ ಎರಚಬಾರದು ಎಂದು ಪರಮೇಶ್ವರ್ ಕಿಡಿ ಕಾರಿದ್ದಾರೆ.



ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪಕ್ಷದ ಪಾದಯಾತ್ರೆ ಸೆಪ್ಟೆಂಬರ್ 1 ರಂದು ಪ್ರಾರಂಭವಾಗಿ ಸೆಪ್ಟೆಂಬರ್ 10 ರಂದು ಮುಕ್ತಾಯಗೊಳ್ಳಲಿದೆ ಎಂದು ಘೋಷಿಸಿದ ನಂತರ ಉಪಮುಖ್ಯಮಂತ್ರಿ ಈ ಹೇಳಿಕೆ ನೀಡಿದ್ದಾರೆ.



## ಸಂಸದೀಯ ಮಂಡಳಿಯಿಂದ ಬಿಎಸ್‌ವೈಗೆ ಕೊಕ್ ಸಾಧ್ಯತೆ

ಬೆಂಗಳೂರು : ಮಹತ್ವದ ಬೆಳವಣಿಗೆಯೊಂದರಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರನ್ನು ಶೀಘ್ರದಲ್ಲೇ ಪಕ್ಷದ ಸಂಸದೀಯ ಮಂಡಳಿಯಿಂದ ಕೈಬಿಡುವ ಸಾಧ್ಯತೆ ಇದೆ ಎನ್ನಲಾಗಿದೆ. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ಬಳಿಕ ಬಿಜೆಪಿಯ ಪರಮೋಚ್ಚ ನಿರ್ಧಾರಕ ಸಂಸ್ಥೆಯಾಗಿರುವ ಸಂಸದೀಯ ಮಂಡಳಿಯಲ್ಲಿ ಅವರಿಗೆ ಸ್ಥಾನ ಕಲ್ಪಿಸಲಾಗಿತ್ತು. ಇದೀಗ ಬದಲಾಗಿರುವ

2ನೇ ಪುಟಕ್ಕೆ..

## ನೇಪಾಳದಲ್ಲಿ ಹಠಾತ್ ಪ್ರವಾಹ: ಕರ್ನಾಟಕದ 13 ಮಂದಿ ನಾಪತ್ತೆ; ಇನ್ನೂ ಸುಳಿವು ಸಿಕ್ಕಿಲ್ಲ : ಸಿಎಂ



ಬೆಂಗಳೂರು: ಕಳೆದ ವಾರ ನೇಪಾಳ-ಟಿಬೆಟ್ ಗಡಿ ಮತ್ತು ಅದರ ಪಕ್ಕದ ಪ್ರದೇಶಗಳಲ್ಲಿ ಸಂಭವಿಸಿದ ಹಠಾತ್ ಪ್ರವಾಹದ ನಂತರ, ರಾಜ್ಯದ ಸುಮಾರು 13 ಮಂದಿ ನಾಪತ್ತೆಯಾಗಿದ್ದು, ಅವರ ಪತ್ತೆ ಇನ್ನೂ ಆಗಬೇಕಿದೆ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೋಮವಾರ ತಿಳಿಸಿದರು.

ಈ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮತ್ತು ಕೇಂದ್ರ ಸರ್ಕಾರದ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ಅವರು ಹೇಳಿದರು.

'ಸುಮಾರು 13 ಮಂದಿಯ ಪತ್ತೆ ಇನ್ನೂ ಆಗಬೇಕಿದೆ. ನಮ್ಮ ಅಧಿಕಾರಿಗಳು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮತ್ತು ಕೇಂದ್ರ ಸರ್ಕಾರದೊಂದಿಗೆ ಸಂಪರ್ಕದಲ್ಲಿದ್ದಾರೆ. ಸಂಪರ್ಕ ಸಾಧಿಸಲು ನಾವು ನಮ್ಮ ಪ್ರತಿನಿಧಿಗಳನ್ನು ಕಳುಹಿಸಿದ್ದೇವೆ. ಒಂದು ಗುಂಪನ್ನು ಪತ್ತೆಹಚ್ಚಲು ಸಾಧ್ಯವಾಗಿಲ್ಲ; ಉಳಿದವರೆಲ್ಲರೂ ಪತ್ತೆಯಾಗಿದ್ದಾರೆ' ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ

2ನೇ ಪುಟಕ್ಕೆ...

## ನಾಲೆಗೆ ಹಾರಿ ಬ್ಯಾಂಕ್ ಉದ್ಯೋಗಿ ಆತ್ಮಹತ್ಯೆ

ಹೊನ್ನಾಳಿ: ಪಟ್ಟಣದ ಐಡಿಎಫ್‌ಸಿ ಬ್ಯಾಂಕ್‌ನಲ್ಲಿ ಸಾಲ ವಸೂಲಿಗಾರರಾಗಿ ಕೆಲಸ ಮಾಡುತ್ತಿದ್ದ ಆರ್. ಮೋಹನ್ (36) ಎಂಬವರು ಶನಿವಾರ ರಾತ್ರಿ ಬೈಕ್ ಸಮೇತ ತುಂಗಾ ನಾಲೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇವರು ನ್ಯಾಮತಿ ತಾಲ್ಲೂಕಿನ ಮಾದನಬಾವಿ ಗ್ರಾಮದವರು. ಭಾನುವಾರ ಮಧ್ಯಾಹ್ನ ಬೈಕ್ ಮತ್ತು ಮೃತದೇಹ ಪತ್ತೆಯಾಗಿವೆ. ಸ್ಥಳಕ್ಕೆ ಮಾಜಿ ಸಚಿವ ರೇಣುಕಾಚಾರ್ಯ ಭೇಟಿ ನೀಡಿದರು. ಐಡಿಎಫ್‌ಸಿ ಬ್ಯಾಂಕ್ ಅಧಿಕಾರಿಗಳು, ಸಿಬ್ಬಂದಿ ತಮ್ಮ ಸಾವಿಗೆ ಕಾರಣ ಎಂಬು ದಾಗಿ, ಆತ್ಮಹತ್ಯೆಗೂ ಮುನ್ನ ಮಾಡಿರುವ ವಿಡಿಯೊದಲ್ಲಿ ಅವರು ಹೇಳಿದ್ದಾರೆ ಎನ್ನಲಾಗಿದ್ದು, ಇದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದೆ. ಆದರೆ ಅವರ ಪತ್ನಿ ರೂಪಾ ಪೊಲೀಸರಿಗೆ ನೀಡಿರುವ ದೂರಿನಲ್ಲಿ 'ನನ್ನ ಗಂಡನ ಸಾವಿಗೆ ಯಾರೂ ಕಾರಣರಲ್ಲ' ಎಂದು ಹೇಳಿಕೆ ಕೊಟ್ಟಿದ್ದಾರೆ.

## ಇಸ್ಲಾಂ ಧರ್ಮವೇ ಶ್ರೇಷ್ಠ: 6ನೇ ಗ್ಯಾರಂಟಿ- ಹಿಂದೂಗಳಿಗೆ "ಸುನ್ನತ್ ಗ್ಯಾರಂಟಿ" ರಾಯರೆಡ್ಡಿ ಕ್ಷಮೆಯಾಚನೆಗೆ ಬಿಜೆಪಿ ಒತ್ತಾಯ!

ಬೆಂಗಳೂರು: ಜಗತ್ತಿನಲ್ಲಿ ಇತರ ಧರ್ಮಗಳಿಗಿಂತ ಇಸ್ಲಾಂ ಶ್ರೇಷ್ಠವಾದದ್ದು ಎಂದು ಹೇಳುವ ಮೂಲಕ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯ-ರೆಡ್ಡಿ ವಿವಾದವನ್ನು ಮೈ ಮೇಲೆ ಎಳೆದುಕೊಂಡಿದ್ದಾರೆ.

ಕೊಪ್ಪಳದ ಕುಕನೂರಿನಲ್ಲಿ ನಡೆದ ಮುಸ್ಲಿಂ ಸಮಾಜದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ರಾಯರೆಡ್ಡಿ, ನಾನು ಹೆಚ್ಚಾಗಿ ಮಠ-ಮಂದಿರಕ್ಕೆ ಹೋಗಲ್ಲ. ಆದರೆ ಒಂದು ಬಾರಿಯಾದರೂ ಹಜ್ ಯಾತ್ರೆ ಕೈಗೊಳ್ಳಬೇಕು ಎಂಬ ಇಂಗಿತ ವ್ಯಕ್ತಪಡಿಸಿದ್ದಾರೆ.

ಸಚಿವರ ಈ ಹೇಳಿಕೆಯನ್ನು ವಿಪಕ್ಷ ಬಿಜೆಪಿ ತೀವ್ರವಾಗಿ ಟೀಕಿಸಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್





ಅವರಿಂದ ಕ್ರಮಕ್ಕೆ ಆಗ್ರಹಿಸಿದೆ. ರಾಯ-ರೆಡ್ಡಿ ಹಿಂದೂ ಸಮುದಾಯದಿಂದ ಕ್ಷಮೆಯಾಚಿಸುವಂತೆ ಮಾಡಬೇಕು ಅಥವಾ ಅವರನ್ನು ಸಚಿವ ಸಂಪುಟದಿಂದ ಕೈಬಿಡಬೇಕು ಎಂದು ವಿಪಕ್ಷ ನಾಯಕ ಆರ್. ಅಶೋಕ್ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಅವರು ಪೋಸ್ಟ್ ಮಾಡಿದ್ದು,

2ನೇ ಪುಟಕ್ಕೆ...

## ಮಂತ್ರಾಲಯದಲ್ಲಿ ವೈಭವದಿಂದ ಜರುಗಿದ ಮಹಾರಥೋತ್ಸವ ಹೆಲಿಕಾಪ್ಟರ್ ಮೂಲಕ ಪುಷ್ಪವೃಷ್ಟಿ

ರಾಯಚೂರು: ಮಂತ್ರಾಲಯ ಗುರುರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವ ಹಿನ್ನೆಲೆ ಮಹಾರಥೋತ್ಸವ ಅದ್ದೂ-ರಿಯಾಗಿ ನೆರವೇರಿತು. ಕಲಿಯುಗ ಕಾಮಧೇನು ಗುರುರಾಘವೇಂದ್ರ ಸ್ವಾಮಿಗಳು ವೃಂದಾವನಸ್ಥರಾದ ಮರುದಿನವನ್ನ ಮಂತ್ರಾಲಯದಲ್ಲಿ ಉತ್ತರಾರಾಧನೆಯಾಗಿ

2ನೇ ಪುಟಕ್ಕೆ...



## ಪೊಲೀಸರಿಗೆ ಕಲೆ, ಸಾಹಿತ್ಯದ ಸಾಂಗತ್ಯ ಅಗತ್ಯ: ಐಜಿಪಿ




ದಾವಣಗೆರೆ: ಪೊಲೀಸರು ಕರ್ತವ್ಯದ ಜೊತೆಗೆ ಕಲೆ, ಸಾಹಿತ್ಯ ಹಾಗೂ ಸಂಗೀತದ ಒಡನಾಟ ಬೆಳೆಸಿಕೊಳ್ಳಬೇಕು. ಇದರಿಂದ ಧಾರಣಾ ಶಕ್ತಿ ಹೆಚ್ಚಾಗುವುದಲ್ಲದೇ ಒತ್ತಡವನ್ನು ಸಮರ್ಥವಾಗಿ ನಿಭಾಯಿಸಲು ಸಾಧ್ಯ ಎಂದು ಪೂರ್ವ ವಲಯದ ಐಜಿಪಿ ಬಿ.ಆರ್. ರವಿಕಾಂತೇಗೌಡ ಅಭಿಪ್ರಾಯಪಟ್ಟರು.

> "ಪೊಲೀಸ್ ಅಧಿಕಾರಿಯಾಗುವ ಬಯಕೆ ಇರಲಿಲ್ಲ. ತಂದೆ-ಯ ಒತ್ತಾಯದ ಮೇರೆಗೆ ಇಲಾಖೆ ಸೇರಿದೆ. ಪೊಲೀಸ್ ಸೇವೆ ಸೇರಿದ್ದು ಸರಿಯಾದ ನಿರ್ಧಾರ ಎಂಬುದು ಆ ಬಳಿಕ ಮನವರಿಕೆಯಾಯಿತು..
> ಬಿ.ಆರ್. ರವಿಕಾಂತೇಗೌಡ, ಐಜಿಪಿ, ಪೂರ್ವವಲಯ

ಇಲ್ಲಿನ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ (ಡಿಎಆರ್) ಮೈದಾನದಲ್ಲಿ ಸೋಮವಾರ ನಡೆದ 'ಸೇವಾ ಕವಾಯತು'ನಲ್ಲಿ ತುಕಡಿಗಳ ಪರಿವೀಕ್ಷಣೆ ನಡೆಸಿ ಗೌರವ ವಂದನೆ ಸ್ವೀಕರಿಸಿ ಅವರು ಮಾತನಾಡಿದರು.

2ನೇ ಪುಟಕ್ಕೆ...

## ಸಚಿವರ ಮನೆ ಎದುರಿನ ಪಾರ್ಕ್‌ಗೆ 90 ಲಕ್ಷ ವೆಚ್ಚ : ಅಫ್ಸರ್ ಕೊಡ್ಲಿಪೇಟೆ ಗಂಭೀರ ಆರೋಪ

ನಗರದ ಗುಂಡಿ ಸರ್ಕಲ್ ಸಮೀಪ ಸಚಿವರ ನಿವಾಸದ ಎದುರು ತೋಟಗಾರಿ-ಕೆ ಇಲಾಖೆಯ ವತಿಯಿಂದ ಸುಮಾರು 90 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಪಾರ್ಕ್ ಕಾಮಗಾರಿ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಕಾಮಗಾರಿಯ ಅಗತ್ಯತೆ ಹಾಗೂ ಇಷ್ಟು ದೊಡ್ಡ ಮೊತ್ತದ ವೆಚ್ಚದ ಬಗ್ಗೆ ಸಾರ್ವಜನಿಕರಲ್ಲಿ ಅನುಮಾನಗಳು ಮೂಡಿದ್ದು, ಈ ಕುರಿತು ಸರ್ಕಾರ ಸಮಗ್ರ ತನಿಖೆ ನಡೆಸಬೇಕು ಎಂದು SDPI ರಾಜ್ಯ ಪ್ರಧಾನ ಕಾರ್ಯದರ್ಶಿ ಅಫ್ಸರ್



ಕೊಡ್ಲಿಪೇಟೆ ಆಗ್ರಹಿಸಿದ್ದಾರೆ.,

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ಸೇರಿದಂತೆ ನಗರದ ಹಲವಾರು ಪ್ರದೇಶಗಳಲ್ಲಿರುವ ಪಾರ್ಕ್‌ಗಳು ಸೂಕ್ತ ನಿರ್ವಹಣೆ

2ನೇ ಪುಟಕ್ಕೆ...

ಅನಂತ ಜನಶಕ್ತಿ



ಒಂದನೇ ಪುಟದಿಂದ..

# ಕೇಂದ್ರ ಸಂಸದೀಯ ಮಂಡಳಿಯಿಂದ ಬಿಎಸ್‌ವೈಗೆ ಕೊಕ್ ಸಾಧ್ಯತೆ

ರಾಜಕೀಯ ಪರಿಸ್ಥಿತಿಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್‌ಅಧಿಕಾರ ವಹಿಸಿಕೊಂಡ ಬಳಿಕ ಪಕ್ಷದ ಸಂಘಟನೆಯಲ್ಲಿ ಹಲವು ಬದಲಾವಣೆಗಳನ್ನು ಕೈಗೊಳ್ಳಲು ಮುಂದಾಗಿದ್ದಾರೆ. ಇದರ ಭಾಗವಾಗಿ ಸಂಸದೀಯ ಮಂಡಳಿಯನ್ನೂ ಪುನರ್‌ರಚಿಸುವ ಸಾಧ್ಯತೆ ಇದ್ದು, ಈ ವೇಳೆ ಯಡಿಯೂರಪ್ಪ ಅವರನ್ನು ಸಮಿತಿಯಿಂದ ಕೈಬಿಡುವ ಸಾಧ್ಯತೆ ಹೆಚ್ಚಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಈಗಾಗಲೇ ಕರ್ನಾಟಕದ ಎಂ. ನಾಗರಾಜ್ ಅವರಿಗೆ ರಾಷ್ಟ್ರೀಯ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಬಿ.ಎಲ್. ಸಂತೋಷ್ ಅವರು ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿಯಾಗಿ ಮುಂದುವರಿದಿದ್ದಾರೆ. ರಾಷ್ಟ್ರಮಟ್ಟದಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಕೆಲ ಹಿರಿಯ ನಾಯಕರಿಗೆ ಸಂಘಟನಾ ಜವಾಬ್ದಾರಿಗಳಿಂದ ವಿಶ್ರಾಂತಿ ನೀಡಲು ಬಿಜೆಪಿ ಚಿಂತನೆ ನಡೆಸಿದೆ ಎನ್ನಲಾಗಿದೆ.

12 ಸದಸ್ಯರ ಬಿಜೆಪಿ ಸಂಸದೀಯ ಮಂಡಳಿ ಲೋಕಸಭೆ ಹಾಗೂ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿ ಅಭ್ಯರ್ಥಿಗಳ ಆಯ್ಕೆ, ಟಿಕೆಟ್ ಹಂಚಿಕೆ ಸೇರಿದಂತೆ ಪಕ್ಷದ ಪ್ರಮುಖ ರಾಜಕೀಯ ನಿರ್ಧಾರಗಳನ್ನು ಕೈಗೊಳ್ಳುತ್ತದೆ. ಈ ಮಹತ್ವದ ಸಮಿತಿಯಲ್ಲಿ ಯಡಿಯೂರಪ್ಪ ಅವರು ಕರ್ನಾಟಕವನ್ನು ಪ್ರತಿನಿಧಿಸುತ್ತಿದ್ದರು.

ಆದರೆ ಬದಲಾಗುತ್ತಿರುವ ರಾಜಕೀಯ ಪರಿಸ್ಥಿತಿಗೆ ಅನುಗುಣವಾಗಿ ಹೊಸ ಚಿಂತನೆ ಹಾಗೂ ಹೊಸ ನಾಯಕತ್ವಕ್ಕೆ ಅವಕಾಶ ಕಲ್ಪಿಸಲು ಬಿಜೆಪಿ ಹೈಕಮಾಂಡ್ ಮುಂದಾಗಿದೆ ಎನ್ನಲಾಗಿದೆ.

ಸಂಘಟನಾತ್ಮಕ ಪುನರ್‌ವ್ಯವಸ್ಥೆಯ ಭಾಗವಾಗಿ ಸಂಸದೀಯ ಮಂಡಳಿಯಲ್ಲೂ ಬದಲಾವಣೆ ತರಲು ಚಿಂತನೆ ನಡೆದಿದ್ದು, ಯಡಿಯೂರಪ್ಪ ಅವರಿಗೆ ಈ ಕುರಿತು ಈಗಾಗಲೇ ಪರೋಕ್ಷ ಸಂದೇಶ ರವಾನೆಯಾಗಿದೆ ಎಂದು ಪಕ್ಷದ ಮೂಲಗಳು ಹೇಳಿವೆ. ಸಂಸದೀಯ ಮಂಡಳಿಯಲ್ಲಿ ಕರ್ನಾಟಕದ ಪ್ರಬಲ ನಾಯಕನಾಗಿದ್ದ ಯಡಿಯೂರಪ್ಪ ಅವರನ್ನು ಕೈಬಿಡುವ ಸಾಧ್ಯತೆಯ ಸುದ್ದಿ ರಾಜ್ಯ ಬಿಜೆಪಿಯೊಳಗೆ ಹೊಸ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ರಾಜ್ಯ ರಾಜಕಾರಣದ ಮೇಲೂ ಇದರ ಪರಿಣಾಮ ಬೀರಬಹುದೇ ಎಂಬ ಕುತೂಹಲ ಮೂಡಿದೆ.

# ಪ್ರಧಾನಿ ಮೋದಿ & ಇರಾನ್ ಅಧ್ಯಕ್ಷ ಭೇಟಿ

ಬಾರಿಗೆ ಭೇಟಿಯಾಗಿದ್ದರು.

ಫೆಬ್ರವರಿ 28 ರಂದು ಅಮೆರಿಕ ಮತ್ತು ಇಸ್ರೇಲಿ ಇರಾನ್ ಮೇಲೆ ದಾಳಿ ಮಾಡಿದಾಗಿನಿಂದ ಅವರು ಹಲವಾರು ಬಾರಿ ಫೋನ್ ಮೂಲಕ ಮಾತನಾಡಿದ್ದಾರೆ. ಆ ಸಂಭಾಷಣೆಗಳು ಉದ್ವಿಗ್ನತೆಯನ್ನು ಕಡಿಮೆ ಮಾಡುವುದು, ನಾಗರಿಕ ರಕ್ಷಣೆ, ಹಾರ್ಮುಜ್ ಜಲಸಂಧಿಯ ಮೂಲಕ ನೌಕಾಯಾನ ಸ್ವಾತಂತ್ರ್ಯ ಮತ್ತು ಭಾರತದ ಇಂಧನ ಭದ್ರತೆಯ ಮೇಲೆ ಕೇಂದ್ರೀಕರಿಸಿದ್ದವು.

ತನ್ನ 25 ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಸೋಮವಾರದ ಸಭೆ ನಡೆದಿದೆ. ಈಗ ಭಾರತ, ಇರಾನ್, ರಷ್ಯಾ, ಚೀನಾ ಮತ್ತು ಪಾಕಿಸ್ತಾನವನ್ನು ಒಳಗೊಂಡಿರುವ ಈ ಗುಂಪು, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಸೇರಿದಂತೆ ನಾಯಕರನ್ನು ಒಟ್ಟುಗೂಡಿಸುತ್ತಿದೆ. ಕಿರ್ಗಿಸ್ತಾನ್ ಅಧ್ಯಕ್ಷ ಸದಿರ್ ಜಪರೋವ್ ಎರಡು ದಿನಗಳ ಕಾರ್ಯಕ್ರಮವನ್ನು ಆಯೋಜಿಸುತ್ತಿದ್ದಾರೆ.

# ತಮಿಳುನಾಡು ವಾದಕ್ಕೆ ಸುಪ್ರೀಂ ಆಕ್ಷೇಪ

ಆಕ್ಷೇಪ ವ್ಯಕ್ತಪಡಿಸಿದೆ. ಕರ್ನಾಟಕ ನೀರು ಹರಿಸುತ್ತಿದೆಯಲ್ಲ ಎಂದು ಕೋರ್ಟ್ ತಿಳಿಸಿತು. ಬಳಿಕ ವಿಚಾರಣೆಯನ್ನು ಸೆ.15ಕ್ಕೆ ಮುಂದೂಡಲಾಯಿತು. ಪರಿಷ್ಕೃತ ಮಾಹಿತಿ ಸಲ್ಲಿಕೆ ಮಾಡಿ. ಅಘಖಅ ಪ್ರತಿ ಹದಿನೈದು ದಿನಕ್ಕೊಮ್ಮೆ ಸಭೆ ನಡೆಸಿ ಪರಿಷ್ಕೃತ ಮಾಹಿತಿ ಆಧಾರದ ಮೇಲೆ ನೀರು ಹರಿಸಲು ಸೂಚಿಸಲಿ. ಬಾಕಿ ನೀರು ಹರಿಸುವ ವಿಚಾರಕ್ಕೆ ಸಂಬಂಧಿಸಿದಂತೆ ನೀವು ಅಘಖಅ ಸಂಪರ್ಕಿಸಿ ಎಂದು ಕೋರ್ಟ್ ಸೂಚಿಸಿತು.

# ನೇಪಾಳದಲ್ಲಿ ಹಠಾತ್ ಪ್ರವಾಹ: ಕರ್ನಾಟಕದ 13 ಮಂದಿ ನಾಪತ್ತೆ; ಇನ್ನೂ ಸುಳಿವು ಸಿಕ್ಕಿಲ್ಲ ಎಂದ ಸಿಎಂ

ಅವರು, ವೈಯಕ್ತಿಕ ಕೆಲಸದ ನಿಮಿತ್ತ ಭಾನುವಾರ ರಾತ್ರಿ ನವದೆಹಲಿಗೆ ತೆರಳಿ ಅಲ್ಲಿನ ಅಧಿಕಾರಿಗಳೊಂದಿಗೆ ಈ ವಿಷಯದ ಕುರಿತು ಚರ್ಚಿಸಿದ್ದೇನೆ. ಅಲ್ಲಿ ಸಿಲುಕಿಕೊಂಡಿರುವವರ ಪೈಕಿ ಕೆಲವರೊಂದಿಗೆ ನಾನು ಮಾತನಾಡಿದ್ದಾಗಿ ತಿಳಿಸಿದರು.

ನೇಪಾಳ ಹಾಗೂ ಟಿಎಆರ್‌ನಲ್ಲಿ ಸಿಲುಕಿಕೊಂಡಿರುವ ಅಥವಾ ನಾಪತ್ತೆಯಾಗಿರುವ ಕರ್ನಾಟಕದ 28 ಮಂದಿಯ ವಿವರಗಳನ್ನು ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರವು ಕ್ರೋಢೀಕರಿಸಿದೆ ಎಂದು ರಾಜ್ಯ ಸರ್ಕಾರ ಶುಕ್ರವಾರ ತಿಳಿಸಿತ್ತು. ಇವರಲ್ಲಿ 23 ಮಂದಿ ಬೆಂಗಳೂರು ನಗರ ಜಿಲ್ಲೆಯವರಾಗಿದ್ದಾರೆ.

ಸಿಕ್ಕಿಹಾಕಿಕೊಂಡಿರುವ ಅಥವಾ ನಾಪತ್ತೆಯಾಗಿರುವವರ ಪೈಕಿ ಹೆಚ್ಚಿನವರು ನೇಪಾಳದ ರಸುವಾ ಜಿಲ್ಲೆಯ ತಿಮುರೆಯಲ್ಲಿ ಇದ್ದರೆ, ಕೆಲವರು ಟಿಬೆಟ್ ಸ್ವಾಯತ್ತ ಪ್ರದೇಶದ ದಾರ್ಚೆನ್‌ನಲ್ಲಿದ್ದರು ಎಂದು ವರದಿಯಾಗಿದೆ.

ಒಟ್ಟು 28 ಮಂದಿಯ ಪೈಕಿ ನಾಲ್ವರು ಸುರಕ್ಷಿತವಾಗಿರುವುದು ಖಚಿತಪಟ್ಟಿದೆ ಮತ್ತು ಉಳಿದ 24 ಮಂದಿಯ ಪತ್ತೆಗೆ ಪ್ರಯತ್ನಗಳು ನಡೆಯುತ್ತಿವೆ ಎಂದು ಸರ್ಕಾರ ತಿಳಿಸಿತ್ತು.

ನೇಪಾಳದಲ್ಲಿ ಸಂಭವಿಸಿದ ಹಠಾತ್ ಪ್ರವಾಹದಿಂದಾಗಿ ಮೃತಪಟ್ಟವರ ಸಂಖ್ಯೆ ಸೋಮವಾರದ ವೇಳೆಗೆ 903ಕ್ಕೆ ಏರಿಕೆಯಾಗಿದೆ; ಈ ದುರಂತದ ನಂತರ ಹೆಚ್ಚಿನ ಮೃತದೇಹಗಳನ್ನು ಹೊರತೆಗೆಯಲಾಗಿದ್ದು, ಸುಮಾರು 4,250 ಮಂದಿ ಇನ್ನೂ ನಾಪತ್ತೆಯಾಗಿದ್ದಾರೆ ಎಂದು ಅಲ್ಲಿನ ಅಧಿಕಾರಿಗಳು ತಿಳಿಸಿದ್ದಾರೆ.

ನೇಪಾಳ-ಟಿಬೆಟ್ ಗಡಿಯ ಸಮೀಪ ಸಂಭವಿಸಿದ ಹಿಮ ಮತ್ತು ಬಂಡೆಗಳ ಕುಸಿತ ಅಥವಾ ಹಿಮಪಾತದಿಂದಾಗಿ ಉಂಟಾದ ಈ ದುರಂತವು, ಆಗಸ್ಟ್ 26 ರಂದು ಉತ್ತರ ಮತ್ತು ಮಧ್ಯ ನೇಪಾಳದ ಪಟ್ಟಣಗಳು ಹಾಗೂ ಹಳ್ಳಿಗಳಲ್ಲಿ ವ್ಯಾಪಕ ಹಾನಿಯನ್ನುಂಟುಮಾಡಿತು.


## ಮಂತ್ರಾಲಯದಲ್ಲಿ ವೈಭವದಿಂದ ಜರುಗಿದ ಮಹಾರಥೋತ್ಸವ

# ಹೆಲಿಕಾಪ್ಟರ್ ಮೂಲಕ ಪುಷ್ಪವೃಷ್ಟಿ

ಸಂಭ್ರಮದಿಂದ ಆಚರಿಸಲಾಗುತ್ತಿದೆ.

ಉತ್ತರಾರಾಧನೆ ಹಿನ್ನೆಲೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಮಠದ ರಾಜಬೀದಿಯಲ್ಲಿ ಮಹಾರಥೋತ್ಸವ ವಿಜೃಂಭಣೆಯಿಂದ ಜರುಗಿತು. ಹೆಲಿಕ್ಯಾಪ್ಟರ್ ಮೂಲಕ ಪ್ರತೀವರ್ಷದಂತೆ ಮಹಾರಥೋತ್ಸವ ವೇಳೆ ರಥಕ್ಕೆ ಪುಷ್ಪವೃಷ್ಠಿಯನ್ನ ಮಾಡಲಾಯಿತು.

ರಥೋತ್ಸವ ಆರಂಭಕ್ಕೂ ಮುನ್ನ ಭಕ್ತರಿಗೆ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥ ಸ್ವಾಮಿ ಆಶೀವರ್ಚನ ನೀಡಿದರು. ನೇಪಾಳದಲ್ಲಿನ ಪ್ರವಾಹ ಪರಿಸ್ಥಿತಿಗೆ ಮರುಗಿದ ಶ್ರೀಗಳು, ಮನೆ ಮಠ ಕಳೆದುಕೊಂಡ ಸಂತ್ರಸ್ತರ ಜೊತೆ ನಾವೆಲ್ಲಾ ಇದ್ದೇವೆ. ನೇಪಾಳ ಸಂತ್ರಸ್ತರ ಸಹಾಯ ಕಾರ್ಯ-ಕ್ಕೆ ಮಠ ತೊಡಗುತ್ತದೆ.



ಇದು ಮಠದ ಪ್ರಚಾರಕ್ಕಾಗಿ ಅಲ್ಲ, ಮಠ ಇರುವುದೇ ಭಕ್ತರಿಂದ ಭಕ್ತರಿಗಾಗಿ. ನೇಪಾಳ ಸಂತ್ರಸ್ತರಿಗೆ ಸಹಾಯ ಮಾಡಲು ಶ್ರೀ ಮಠ ಯೋಜನೆಗಳನ್ನ ಸಿದ್ಧಪಡಿಸಿದೆ. ಈ ಬಾರಿ ರಾಜ್ಯದಲ್ಲಿ ಬರಗಾಲ ಪರಸ್ಥಿತಿ ಇದೆ ರೈತರು ಎದೆಗುಂದಬಾರದು. ನಾಡಿನ ಜನತೆಗೆ ಒಳ್ಳೆಯ ದಿನಗಳು ಬರಲಿವೆ ಎಂದರು.

ಈ ಮೂಲಕ ಗುರುರಾಯರ 355ನೇ ಆರಾಧನಾ ಮಹೋತ್ಸವದ ಮುಖ್ಯ ಮೂರು ದಿನಗಳು ಮುಕ್ತಾಯವಾಗಿದ್ದು, ಸಪ್ತರಾತ್ರೋತ್ಸವ ಅಂಗವಾಗಿ ಇನ್ನೂ ಎರಡು ದಿನಗಳ ಕಾಲ ಮಂತ್ರಾಲಯ ರಾಯರ ಮಠದಲ್ಲಿ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ.

# ಭಾನುವಳ್ಳಿ ಗ್ರಾಮದಲ್ಲಿ ಆಕಸ್ಮಿಕ ಬೆಂಕಿ ತಗುಲಿ ಭತ್ತದ ಹುಲ್ಲಿನ ಬಣವೆ ಭಸ್ಮ




ಕಡರನಾಯ್ಕನಹಳ್ಳಿ: ಸಮೀಪದ ಭಾನುವಳ್ಳಿ ಗ್ರಾಮದಲ್ಲಿ ಭಾನುವಾರ ಸಂಜೆ ಆಕಸ್ಮಿಕ ಬೆಂಕಿ ತಗುಲಿ ಭತ್ತದ ಹುಲ್ಲಿನ ಬಣವೆ ಭಸ್ಮವಾಗಿದೆ. ಪುಟ್ಟವರ ಮಲ್ಲಪ್ಪ ಅವರಿಗೆ ಸೇರಿದ ಬಣವೆಗೆ ಹೊತ್ತಿದ್ದ ಬೆಂಕಿಯನ್ನು ಆರಿಸಲು ಸುತ್ತಮುತ್ತಲಿನ ರೈತರು ಮುಂದಾದರು. ಹರಿಹರದಿಂದ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ, ಬೆಂಕಿ ಆರಿಸುವಲ್ಲಿ ಯಶಸ್ವಿಯಾದರು.

'6 ಲೋಡ್ ಭತ್ತದ ಹುಲ್ಲು ಸುಟ್ಟಿದ್ದು, 30,000 ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. ಮಳೆಗಾಲದ ಬೆಳೆಗೆ ಭದ್ರಾ ಜಲಾಶಯದ ನೀರು ಬಿಡದ ಕಾರಣ ಭತ್ತದ ನಾಟಿ ಮಾಡಿಲ್ಲ. ಒಂದು ವರ್ಷ ಜಾನುವಾರುಗಳಿಗೆ ಮೇವು ಇಲ್ಲದಂತಾಗಿದೆ. ಹೈನುಗಾರಿಕೆಯಲ್ಲಿ ರೈತರ ಜೀವನ ನಡೆಯುತ್ತಿದೆ. ಇಂತಹ ಸಂಕಷ್ಟಕ್ಕೆ ಸರ್ಕಾರ ನೆರವು ನೀಡಬೇಕು' ಎಂದು ರೈತ ಸಂಘದ ಹಸಿರು ಸೇನೆ ಗ್ರಾಮ ಘಟಕದ ಅಧ್ಯಕ್ಷ ಬಾನುವಳ್ಳಿ ಪ್ರಕಾಶ್ ಒತ್ತಾಯಿಸಿದರು.

ಪ್ರಿಯ ಓದುಗರೇ, ಅನಂತ ಜನಶಕ್ತಿ
ಇ-ದಿನ ಪತ್ರಿಕೆಗೆ ಸುದ್ದಿ ಮತ್ತು ಜಾಹೀರಾತು
ನೀಡಲು ಕೂಡಲೇ ಸಂಪರ್ಕಿಸಿ

# ಜನರ ಮನೆ ಬಾಗಿಲಿಗೆ ಆಡಳಿತ

## ಸೆ.5ರಂದು ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ



ಬೆಂಗಳೂರು: ಸರ್ಕಾರಿ ಕಚೇರಿಗಳಿಗೆ ಅಲೆದಾಡದೆ ತಮ್ಮ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ ರಾಜ್ಯ ಸರ್ಕಾರ 'ಪ್ರಜಾಸೇವಾ ಅಭಿಯಾನ' ಆರಂಭಿಸುತ್ತಿದೆ. ಆಡಳಿತವನ್ನು ಜನರ ಬಳಿಗೆ ಕೊಂಡೊಯ್ಯುವ ಉದ್ದೇಶದ ಈ ಅಭಿಯಾನಕ್ಕೆ ಸೆ.5ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿ ಹೋಬಳಿಯಲ್ಲಿ ಚಾಲನೆ ದೊರೆಯಲಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ. ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ಕುಂದುಕೊರತೆ, ಅರ್ಜಿ ಹಾಗೂ ದೂರುಗಳನ್ನು ನೇರವಾಗಿ ಸ್ವೀಕರಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹರಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಹೆಚ್ಚಿನ ಸಮಯ ಬೇಕಾಗುವ ಸಮಸ್ಯೆಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವ ಮೂಲಕ ಅಧಿಕಾರಿಗಳ ಹೊಣೆಗಾರಿಕೆಯನ್ನು ಹೆಚ್ಚಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ಸಣ್ಣಪುಟ್ಟ ಕೆಲಸಗಳಿಗೂ ತಾಲೂಕು

ಕಚೇರಿ, ಗ್ರಾಮ ಪಂಚಾಯಿತಿ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳಿಗೆ ಪದೇಪದೆ ಅಲೆದಾಡಬೇಕಾದ ಪರಿಸ್ಥಿತಿಯನ್ನು ತಪ್ಪಿಸಿ, ಆಡಳಿತವನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಅಭಿಯಾನದ ಆಶಯವಾಗಿದೆ. ಸಾರ್ವಜನಿಕರ ಅಹವಾಲುಗಳನ್ನು ಆಲಿಸುವುದರ ಜತೆಗೆ ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಲು ಸಭೆಗಳಲ್ಲಿ ಇಲಾಖಾವಾರು ಮಳಿಗೆಗಳನ್ನು ಸ್ಥಾಪಿಸಲಾಗುತ್ತದೆ. ಪ್ರತಿ ಶನಿವಾರ ತಾಲೂಕು ಅಥವಾ ಹೋಬಳಿ ಮಟ್ಟದಲ್ಲಿ ಪ್ರಜಾಸೇವಾ ಅಭಿಯಾನ ಸಭೆಗಳನ್ನು ಆಯೋಜಿಸಲಾಗುತ್ತದೆ. ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತಾಲೂಕು ಕೇಂದ್ರದಲ್ಲಿ ಸಭೆ ನಡೆಯಲಿದೆ. ಎರಡನೇ ಮತ್ತು ನಾಲ್ಕನೇ ಶನಿವಾರ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ತಾಲೂಕು ಅಥವಾ ಹೋಬಳಿ ಮಟ್ಟದಲ್ಲಿ ಸಭೆ ನಡೆಸಲಾಗುತ್ತದೆ. ಮುಂದಿನ ಮೂರು-ನಾಲ್ಕು ತಿಂಗಳಲ್ಲಿ ರಾಜ್ಯದ ಎಲ್ಲ ತಾಲೂಕು ಹಾಗೂ ಹೋಬಳಿಗಳಲ್ಲಿ ಸಭೆ ನಡೆಸಲು ಏಕೀಕೃತ ವೇಳಾಪಟ್ಟಿ ಸಿದ್ಧಪಡಿಸಲಾಗುತ್ತದೆ. ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಸಭೆ ನಡೆಯುವ ದಿನವೇ ಅದೇ ಕ್ಷೇತ್ರದಲ್ಲಿ ಪ್ರತ್ಯೇಕ ಶಾಸಕರ ಸಭೆ ನಡೆಸುವುದಿಲ್ಲ. ಸಂಬಂಧಿಸಿದ ಶಾಸಕರು ಸಚಿವರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಭೆಯ ಕುರಿತು ಸಾರ್ವಜನಿಕರಿಗೆ ಕನಿಷ್ಠ 15 ದಿನಗಳ ಮುಂಚಿತವಾಗಿ ಮನೆ-ಮನೆಗೆ ಕರಪತ್ರ ವಿತರಿಸಿ ಮಾಹಿತಿ ನೀಡಲಾಗುತ್ತದೆ. ಕರಪತ್ರದಲ್ಲಿಯೇ ಅರ್ಜಿ ನಮೂನೆ ಹಾಗೂ ಅಗತ್ಯ ದಾಖಲೆಗಳ ವಿವರ ನೀಡಲಾಗುತ್ತದೆ. ಕೃತಕ ಬುದ್ಧಿಮತ್ತೆ ಆಧಾರಿತ ಕರೆ ವ್ಯವಸ್ಥೆಯ ಮೂಲಕ ಸಭೆಯ ದಿನಾಂಕ, ಸಮಯ, ಸ್ಥಳ ಹಾಗೂ ಅಧ್ಯಕ್ಷತೆ ವಹಿಸುವ ಜನಪ್ರತಿನಿಧಿಗಳ

ಒಂದನೇ ಪುಟದಿಂದ..

# ಸಚಿವರ ಮನೆ ಎದುರಿನ ಪಾರ್ಕ್‌ಗೆ 90 ಲಕ್ಷ ವೆಚ್ಚ : ಆರೋಪ

ಇಲ್ಲದೆ ಪಾಳು ಬಿದ್ದಿವೆ. ಅನೇಕ ಪಾರ್ಕ್‌ಗಳಿಗೆ ಸುತ್ತಲೂ ತಡೆಗೋಡೆ ಅಥವಾ ಕಾಂಪೌಂಡ್ ಇಲ್ಲದೆ ಬೀಡಾಡಿ ದನಗಳ ಓಡಾಟಕ್ಕೆ ಅವಕಾಶವಾಗಿದ್ದು, ಕೆಲವು ಪ್ರದೇಶಗಳು ಅಸಾಮಾಜಿಕ ಚಟುವಟಿಕೆಗಳಿಗೆ ಮತ್ತು ಪಡ್ಡೆ ಯುವಕರ ಅಡ್ಡೆಗಳಾಗಿ ಮಾರ್ಪಟ್ಟಿವೆ. ಮಕ್ಕಳ ಆಟದ ಮೈದಾನಗಳು, ವಾಕಿಂಗ್ ಟ್ರ್ಯಾಕ್‌ಗಳು ಹಾಗೂ ಸಾರ್ವಜನಿಕರಿಗೆ ವಿಶ್ರಾಂತಿ ಪಡೆಯುವ ಸ್ಥಳಗಳು ಸೂಕ್ತ ನಿರ್ವಹಣೆಯಿಲ್ಲದೆ ಹದಗೆಟ್ಟಿವೆ.

ನಗರದ ಇಂತಹ ಪಾರ್ಕ್‌ಗಳಿಗೆ ಮೊದಲು ಕಾಂಪೌಂಡ್ ನಿರ್ಮಿಸಿ, ಸ್ವಚ್ಛತೆ, ವಿದ್ಯುತ್ ದೀಪ, ಭದ್ರತೆ, ಹಸಿರೀಕರಣ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬದಲು, ಸಚಿವರ ನಿವಾಸದ ಎದುರಿನ ಪಾರ್ಕ್‌ಗೆ ಮಾತ್ರ ಸುಮಾರು 90 ಲಕ್ಷ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳುತ್ತಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

"ದಾವಣಗೆರೆ ನಗರದ ಬಡಾವಣೆಗಳಲ್ಲಿರುವ ಪಾರ್ಕ್‌ಗಳಿಗೆ ಕಾಂಪೌಂಡ್ ಹಾಕಲು ಹಣವಿಲ್ಲವೇ? ನಿರ್ವಹಣೆ ಇಲ್ಲದೆ ಪಾಳು ಬಿದ್ದಿರುವ ಪಾರ್ಕ್‌ಗಳು ಅಧಿಕಾರಿಗಳ ಗಮನಕ್ಕೆ ಬಂದಿಲ್ಲವೇ? ಬೀಡಾಡಿ ದನಗಳು ಹಾಗೂ ಅಸಾಮಾಜಿಕ ಚಟುವಟಿಕೆಗಳಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಕಾಣುತ್ತಿಲ್ಲವೇ? ಹಾಗಾದರೆ ಸಚಿವರ ಮನೆ ಎದುರಿನ ಪಾರ್ಕ್‌ಗೆ ಮಾತ್ರ ಇಷ್ಟು ದೊಡ್ಡ ಮೊತ್ತದ ಕಾಮಗಾರಿ ಏಕೆ?" ಎಂದು ಅಫ್ಸರ್ ಕೊಡ್ಲಿಪೇಟೆ ಪ್ರಶ್ನಿಸಿದ್ದಾರೆ.

ಸಾರ್ವಜನಿಕರ ತೆರಿಗೆ ಹಣವನ್ನು ಜನರ ಅಗತ್ಯತೆ ಮತ್ತು ಆದ್ಯತೆಯ ಆಧಾರದ ಮೇಲೆ ಬಳಸಬೇಕೇ ಹೊರತು, ಯಾವುದೇ ವ್ಯಕ್ತಿ ಅಥವಾ ಪ್ರಭಾವಿ ಪ್ರದೇಶವನ್ನು ಗಮನದಲ್ಲಿಟ್ಟುಕೊಂಡು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬಾರದು. ಈ ಹಿನ್ನೆಲೆಯಲ್ಲಿ 90 ಲಕ್ಷದ ಕಾಮಗಾರಿಗೆ ಸಂಬಂಧಿಸಿದ ಅಂದಾಜು, ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆ, ಟೆಂಡರ್ ಪ್ರಕ್ರಿಯೆ, ಗುತ್ತಿಗೆದಾರರ ವಿವರ ಹಾಗೂ ಕಾಮಗಾರಿಯ ನೈಜ ಅವಶ್ಯಕತೆ ಸೇರಿದಂತೆ ಸಂಪೂರ್ಣ ಮಾಹಿತಿಯನ್ನು ಸಾರ್ವಜನಿಕರ ಮುಂದಿಡಬೇಕು. ಈ ಕಾಮಗಾರಿಯಲ್ಲಿ ಯಾವುದೇ ನಿಯಮ ಉಲ್ಲಂಘನೆ, ಅನಗತ್ಯ ವೆಚ್ಚ ಅಥವಾ ಸಾರ್ವಜನಿಕ ಹಣದ ದುರುಪಯೋಗ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಜೊತೆಗೆ ದಾವಣಗೆರೆ ನಗರದ ಎಲ್ಲಾ ಪಾರ್ಕ್‌ಗಳ ಸ್ಥಿತಿಗತಿಗಳ ಕುರಿತು ಸಮಗ್ರ ಸಮೀಕ್ಷೆ ನಡೆಸಿ, ಕಾಂಪೌಂಡ್, ಸ್ವಚ್ಛತೆ, ಹಸಿರುಕರಣ, ಬೆಳಕು, ಭದ್ರತೆ ಮತ್ತು ನಿರ್ವಹಣೆಗೆ ಆದ್ಯತೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

"ಸಚಿವರ ಮನೆ ಎದುರಿನ ಪಾರ್ಕ್ ಮಾತ್ರವಲ್ಲ, ದಾವಣಗೆರೆಯ ಪ್ರತಿಯೊಂದು ಪಾರ್ಕ್‌ವೂ ಸಾರ್ವಜನಿಕರ ಆಸ್ತಿಯಾಗಿದೆ.

ಸಚಿವರ ಮನೆ ಎದುರು ಇರುವುದರಿಂದ ಒಂದು ಪಾರ್ಕ್‌ಗೆ ವಿಶೇಷ ಆದ್ಯತೆ, ಉಳಿದ ಪಾರ್ಕ್‌ಗಳಿಗೆ ನಿರ್ಲಕ್ಷ್ಯ ಎಂಬ ಭಾವನೆ ಜನರಲ್ಲಿ ಮೂಡಬಾರದು. ಸರ್ಕಾರ ಕೂಡಲೇ ಈ ಕಾಮಗಾರಿಯನ್ನು ಪರಿಶೀಲಿಸಿ, ಸಾರ್ವಜನಿಕರ ಹಣದ ಪ್ರತಿಯೊಂದು ರೂಪಾಯಿಯೂ ಜನರ ಹಿತಕ್ಕಾಗಿ ಬಳಕೆಯಾಗುವಂತೆ ಖಚಿತಪಡಿಸಬೇಕು" ಎಂದು ಅಫ್ಸರ್ ಕೊಡ್ಲಿಪೇಟೆ ಆಗ್ರಹಿಸಿದ್ದಾರೆ.

# ಪೊಲೀಸರಿಗೆ ಕಲೆ, ಸಾಹಿತ್ಯದ ಸಾಂಗತ್ಯ ಅಗತ್ಯ: ಐಜಿಪಿ

'ಮೂರು ದಶಕಗಳ ಸುದೀರ್ಘ ಸೇವಾವಧಿಯಲ್ಲಿ ಸಾಹಿತ್ಯ ಮತ್ತು ಸಂಗೀತದ ಸಾಂಗತ್ಯವನ್ನು ಬಿಟ್ಟುಕೊಡಲಿಲ್ಲ. ಮನಸ್ಸಿಗೆ ಮುದ ನೀಡುವ ಸಾಂಸ್ಕೃತಿಕ ಚಟುವಟಿಕೆಗಳು ಪೊಲೀಸರ ಕಾರ್ಯಕ್ಷಮತೆಯನ್ನು ಇನ್ನಷ್ಟು ಹೆಚ್ಚಿಸಲಿವೆ' ಎಂದು ಪ್ರತಿಪಾದಿಸಿದರು.

'ಪೊಲೀಸರಿಗೆ ಈ ಹಿಂದೆ ಕೋಮುಗಲಭೆ ಮಾತ್ರವೇ ಸವಾಲಾಗಿತ್ತು. ಕಾಲಕ್ಕೆ ಅನುಗುಣವಾಗಿ ಪೊಲೀಸರ ಸವಾಲುಗಳು ಬದಲಾಗಿವೆ. ಡಿಜಿಟಲ್ ಅಪರಾಧ ಹಾಗೂ ಭಯೋತ್ಪಾದನೆ ಎದುರಿಸಲು ಪೊಲೀಸರು ಸಜ್ಜಾಗಬೇಕಿದೆ. ಇದಕ್ಕೆ ನಿರಂತರ ಅಧ್ಯಯನ, ತಂತ್ರಜ್ಞಾನದ ಅರಿವು ಅಗತ್ಯ' ಎಂದರು.

'ನೊಂದವರ ಕಣ್ಣೀರು ಒರೆಸುವ ಸಾಮರ್ಥ್ಯ ಪೊಲೀಸರಿಗೆ ಇದೆ. ತಕ್ಷಣ ನ್ಯಾಯ ಒದಗಿಸುವ ಅಧಿಕಾರ ಕೂಡ ಪೊಲೀಸರಿಗಿದೆ. ಇದಕ್ಕೆ ಜನರ ನಂಬಿಕೆ, ವಿಶ್ವಾಸವನ್ನು ಉಳಿಸಿಕೊಳ್ಳಬೇಕು. ಪೊಲೀಸರು ಸಮುದಾಯದ ವಿಶ್ವಾಸ ಗಳಿಸಿದಾಗ ಪ್ರಜಾಪ್ರಭುತ್ವ ವ್ಯವಸ್ಥೆ ಯಶಸ್ಸು ಕಾಣುತ್ತದೆ. ಕಾನ್‌ಸ್ಟೆಬಲ್‌ನಿಂದ ಡಿಜಿವರೆಗೆ ಎಲ್ಲರೂ ಒಗ್ಗೂಡಿ ಕೆಲಸ ಮಾಡಿದಾಗ ಇದು ಸಾಧ್ಯವಾಗಲಿದೆ' ಎಂದು ಹೇಳಿದರು. 'ಶ್ರೀಮಂತರ ಮಕ್ಕಳು ಪೊಲೀಸ್ ಇಲಾಖೆ ಸೇರುವುದಿಲ್ಲ. ಬಹುತೇಕ ಪೊಲೀಸರು ಬಡ ಮತ್ತು ಮಧ್ಯಮ ವರ್ಗದ ಕುಟುಂಬದಿಂದ ಬಂದವರು. ಪೊಲೀಸರ ಸ್ಪಂದನೆ ಕೂಡ ನೊಂದವರ, ಬಡವರ ಪರವಾಗಿರಬೇಕು. ಅಪರಾಧ ಪತ್ತೆ, ಕಾನೂನು ಸುವ್ಯವಸ್ಥೆ ಹಾಗೂ ಸಂಚಾರ ವಿಭಾಗದಲ್ಲಿ ಕೆಲಸ ಮಾಡುವವರು ಜನಸಾಮಾನ್ಯರ ಸಹಾನುಭೂತಿ ಪಡೆಯಲು ಪ್ರಯತ್ನಿಸಬೇಕು' ಎಂದು ಸಲಹೆ ನೀಡಿದರು. ರವಿಕಾಂತೇಗೌಡ ಅವರ ಪತ್ನಿ ಶೋಭಾ, ಹಾವೇರಿ ಪೊಲೀಸ್ ವರಿಷ್ಠಾಧಿಕಾರಿ ಯಶೋದ ವಂಟಿಗೋಡಿ, ಶಿವಮೊಗ್ಗ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್, ಚಿತ್ರದುರ್ಗ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಹಾಜರಿದ್ದರು. ಇಂಗ್ಲಿಷನ್‌ನಲ್ಲಿದ್ದ ಪೊಲೀಸ್ ಪರೇಡ್‌ಗೆ ಕನ್ನಡದ ಸ್ಪರ್ಶ ನೀಡಿ ಕವಾಯತುವಾಗಿ ರೂಪಿಸಿದವರಲ್ಲಿ ಬಿ.ಆರ್. ರವಿಕಾಂತೇಗೌಡ ಪ್ರಮುಖರು. ಅವರ ಸೇವಾವಧಿಯ ಕೊನೆಯ ದಿನ ನಡೆದ ಕವಾಯತಿನಲ್ಲಿ ಇದನ್ನು ಸ್ಮರಿಸಲಾಯಿತು. ಪೊಲೀಸ್ ಬ್ಯಾಂಡ್‌ನಲ್ಲಿ ಕನ್ನಡ ಗೀತೆಗಳು ಸುಶ್ರಾವ್ಯವಾಗಿ ಹೊರಹೊಮ್ಮಿದವು. ಬ್ಯಾಂಡ್‌ನ ತಾಳಬದ್ಧತೆಗೆ ಎಲ್ಲರೂ ತಲೆದೂಗಿದರು.

'ಕವಾಯತಿಗೆ ಕನ್ನಡ ಸ್ಪರ್ಶ ನೀಡಿ ಅನುಷ್ಠಾನಕ್ಕೆ ತಂದವರು ರವಿಕಾಂತೇಗೌಡ. ಪೊಲೀಸ್ ಬೀಟ್ ವ್ಯವಸ್ಥೆ ರೂಪಿಸುವಲ್ಲಿ ಇವರ ಶ್ರಮ ಅಪಾರ. ಪೊಲೀಸ್ ಇಲಾಖೆ ಇರುವವರೆಗೂ ಅವರ ಕೊಡುಗೆ ಅಜರಾಮರ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ಎಚ್.ಟಿ. ಮೆಚ್ಚುಗೆ ವ್ಯಕ್ತಪಡಿಸಿದರು.

# ಇಸ್ಲಾಂ ಧರ್ಮವೇ ಶ್ರೇಷ್ಠ: 6ನೇ ಗ್ಯಾರಂಟಿ- ಹಿಂದೂಗಳಿಗೆ 'ಸುನ್ನತ್ ಗ್ಯಾರಂಟಿ' ರಾಯರೆಡ್ಡಿ ಕ್ಷಮೆಯಾಚನೆಗೆ ಬಿಜೆಪಿ ಒತ್ತಾಯ!

ಸಿಎಂ ಡಿಕೆಶಿ ಅವರ 6ನೇ ಗ್ಯಾರಂಟಿ – ಹಿಂದೂಗಳಿಗೆ 'ಸುನ್ನತ್ ಗ್ಯಾರಂಟಿ ಎಂದಿದ್ದಾರೆ. ಸಿಎಂ ಡಿಕೆ ಶಿವಕುಮಾರ್ ಅವರೇ, ಹಿಂದೂಗಳ ಮತ ಬೇಕಾದಾಗ ದೇವಸ್ಥಾನ ಸುತ್ತುವ ನಾಟಕ ಆಡುವ ನಿಮಗೆ, ಅಧಿಕಾರ ಸಿಕ್ಕ ಮೇಲೆ ನಿಮ್ಮದೇ ಸಂಪುಟದ ಸಚಿವರು ಅದೇ ಹಿಂದೂ ಧರ್ಮವನ್ನು ಅವರಹೇಳನ ಮಾಡಿದಾಗ ಮೌನ ವಹಿಸುವುದೇಕೆ? ನಿಮ್ಮ ಸಂಪುಟದ ಸಚಿವ ಬಸವರಾಜ ರಾಯರೆಡ್ಡಿ ಅವರು "ಇಸ್ಲಾಂ ಧರ್ಮವೇ ಶ್ರೇಷ್ಠ, ನಾನು ಮಠಕ್ಕೆ ಹೋಗುವುದಿಲ್ಲ" ಎಂದು ಬಹಿರಂಗವಾಗಿ ನೀಡಿರುವ ಪ್ರಚೋದನಾಕಾರಿ ಹೇಳಿಕೆ ಇಡೀ ರಾಜ್ಯಾದ್ಯಂತ ಕೋಟ್ಯಂತರ ಹಿಂದೂಗಳ ಭಾವನೆಗೆ ಧಕ್ಕೆ ತಂದಿದೆ ಎಂದು ಆರೋಪಿಸಿದ್ದಾರೆ.

ಧರ್ಮದ ಬಗ್ಗೆ ಯಾರಿಗಾದರೂ ಅವರವರ ವೈಯಕ್ತಿಕ ನಂಬಿಕೆ ಇರಬಹುದು. ಆದರೆ ಜವಾಬ್ದಾರಿಯುತ ಸಚಿವ ಸ್ಥಾನದಲ್ಲಿದ್ದುಕೊಂಡು ಕೋಟ್ಯಂತರ ಹಿಂದೂಗಳ ಆರಾಧನೆ, ಪವಿತ್ರ ಮಠ-ಮಾನ್ಯಗಳು ಮತ್ತು ಸನಾತನ ಪರಂಪರೆಯ ಬಗ್ಗೆ ಹಗುರವಾಗಿ ಮಾತನಾಡುವುದು ಅಹಂಕಾರ ಮತ್ತು ಹಿಂದೂ ಧರ್ಮದ ಮೇಲಿನ ಬಹಿರಂಗ ದಾಳಿ, ಹಿಂದೂಗಳ ಶ್ರದ್ಧೆ, ನಂಬಿಕೆಗಳಿಗೆ ಮಾಡಿರುವ ಘೋರ ಅಪಮಾನ ಎಂದು ವಾಗ್ದಾಳಿ ನಡೆಸಿದ್ದಾರೆ.

ಕರ್ನಾಟಕದ ಕೋಟ್ಯಾಂತರ ಹಿಂದೂಗಳಿಗೆ ರಾಯರೆಡ್ಡಿ ಅವರ ಅವಹೇನಕಾರಿ ಹೇಳಿಕೆಗಿಂತಲೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಜಾಣ ಮೌನವೇ ಹೆಚ್ಚಿನ ಆಕ್ರೋಶ ತರಿಸುತ್ತಿದೆ. ಹಿಂದೂಗಳ ಭಾವನೆ ನಜ್ಜುಗುಜ್ಜಾದರೂ ಚಿಂತೆಯಿಲ್ಲ, ಓಲೈಕೆ ರಾಜಕಾರಣಕ್ಕಾಗಿ ಸಚಿವರನ್ನು ಮಾತ್ರ ರಕ್ಷಿಸಬೇಕು!" ಇದೇ ಕಾಂಗ್ರೆಸ್ ಪಕ್ಷದ ಹಿಂದೂ ವಿರೋಧಿ ಮನಸ್ಥಿತಿಯ ಅಸಲಿ ಮುಖವಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ರಾಯರೆಡ್ಡಿ ಅವರ ಈ ಹಿಂದೂ ವಿರೋಧಿ ಅವಹೇಳನಕಾರಿ ಹೇಳಿಕೆಯನ್ನು ಬಹಿರಂಗವಾಗಿ ಖಂಡಿಸಿ. ಕೋಟ್ಯಂತರ ಹಿಂದೂಗಳ ಧಾರ್ಮಿಕ ಭಾವನೆಗೆ ಮಾಡಿರುವ ಅವರಿಂದ ತಕ್ಷಣವೇ ಸಾರ್ವಜನಿಕ ಕ್ಷಮೆಯಾಚನೆ ಮಾಡಿಸಿ. ಅವರು ಅದಕ್ಕೆ ಸಿದ್ಧರಿಲ್ಲದಿದ್ದರೆ, ಅವರನ್ನು ತಕ್ಷಣವೇ ಸಚಿವ ಸಂಪುಟದಿಂದ ವಜಾಗೊಳಿಸಿ. ಇವೆರಡನ್ನೂ ಮಾಡದಿದ್ದರೆ ರಾಜ್ಯದ ಕೋಟ್ಯಾಂತರ ಹಿಂದೂಗಳ ಈ ಪ್ರಶ್ನೆಗಳಿಗೆ ನಿಮ್ಮ ಮೌನವೇ ಉತ್ತರವಾಗಲಿದೆ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

# ಮೈಸೂರು ದಸರಾಕ್ಕೆ ಭರ್ಜರಿ ಸಿದ್ಧತೆ: 9 ಆನೆಗಳ ಗಜಪಡೆ ಸಜ್ಜು



ಮೈಸೂರು : ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವಕ್ಕೆ ನಗರದಲ್ಲಿ ಈಗಾಗಲೇ ಭರದ ಸಿದ್ಧತೆಗಳು ಆರಂಭವಾಗಿವೆ. ಅಕ್ಟೋಬರ್ 11ರಿಂದ ದಸರಾ ಉತ್ಸವಗಳು ಆರಂಭವಾಗಲಿದ್ದು, ಅಕ್ಟೋಬರ್ 21ರಂದು ವಿಜಯದಶಮಿ ಹಾಗೂ ಸಾಂಪ್ರದಾಯಿಕ ಜಂಬೂ ಸವಾರಿ ನಡೆಯಲಿದೆ.

ಮೊದಲ ಹಂತದಲ್ಲಿ 9 ಆನೆಗಳ ಗಜಪಡೆಯನ್ನು ಮೈಸೂರು ಅರಮನೆಗೆ ಸಂಪ್ರದಾಯಬದ್ಧವಾಗಿ ಸ್ವಾಗತಿಸಲಾಗಿದ್ದು, ಜಂಬೂ ಸವಾರಿಗೆ ಆನೆಗಳ ತರಬೇತಿ ಹಾಗೂ ಸಿದ್ಧತೆಗಳು ಚುರುಕುಗೊಂಡಿವೆ. ಗಜಪಡೆಯ ತೂಕ ಪರಿಶೀಲನೆಯಲ್ಲಿಯೂ ಆನೆಗಳ ತೂಕ ದಾಖಲಿಸಲಾಗಿದೆ. ಶ್ರೀಕಾಂತ 5,770 ಕೆ.ಜಿ. ತೂಕದೊಂದಿಗೆ ಅತಿ ಹೆಚ್ಚು ತೂಕದ ಆನೆಯಾಗಿದ್ದು, ಏಕಲವ್ಯ 5,610 ಕೆ.ಜಿ. ತೂಕ ಹೊಂದಿದೆ. ಈ ಬಾರಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸ್ಥಳೀಯ, ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಕಲಾವಿದರಿಗೆ ಅವಕಾಶ ಕಲ್ಪಿಸುವ ಯೋಜನೆ ರೂಪಿಸಲಾಗಿದೆ. ಇದೇ ವೇಳೆ ಕರಾವಳಿಯ ಸಾಂಪ್ರದಾಯಿಕ ಕಂಬಳವನ್ನು ದಸರಾ ಉತ್ಸವದಲ್ಲಿ ಸೇರಿಸುವ ಕುರಿತು ಚರ್ಚೆ ನಡೆಯುತ್ತಿದೆ.

ದಸರಾ ಮಹೋತ್ಸವದ ಯಶಸ್ವಿ ಆಯೋಜನೆಗಾಗಿ ಮೈಸೂರಿನಲ್ಲಿ ಸರಣಿ ಸಭೆಗಳು ಹಾಗೂ ಪೂರ್ವಸಿದ್ಧತಾ ಕಾರ್ಯಗಳು ಮುಂದುವರಿದಿವೆ.

# ಧ್ರುವತಾರೆ ಕಪ್ ಫೈನಲ್‌ನಲ್ಲಿ ಕ್ರೀಡಾಪಟುಗಳಿಗೆ ಶುಭ ಹಾರೈಕೆ



ಮಳವಳ್ಳಿ: ತಾಲೂಕಿನ ಶ್ರೀ ಮಹದೇಶ್ವರ ದೇವಸ್ಥಾನದ ಮೈದಾನದಲ್ಲಿ ಮಾಜಿ ಸಂಸದ ದಿ. ಆರ್. ಧ್ರುವನಾರಾಯಣ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಟೆನಿಸ್ ಬಾಲ್ ಶಾರ್ಟ್‌ಪಿಚ್ ಹೊನಲು ಬೆಳಕಿನ 'ಧ್ರುವತಾರೆ ಕಪ್' ಫ್ರಾಂಚೈಸಿ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಭಾಗವಹಿಸಿ ಕ್ರೀಡಾಪಟುಗಳಿಗೆ ಶುಭ ಹಾರೈಸಲಾಯಿತು.

ಆರ್. ಧ್ರುವನಾರಾಯಣ ಅವರು ಶಿಕ್ಷಣದ ಜೊತೆಗೆ ಕ್ರೀಡೆಗೂ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದರು. ಅವರ ಸ್ಮರಣಾರ್ಥ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿರುವುದು ಸಂತಸ ತಂದಿದೆ. ಯುವಕರು ಕ್ರೀಡೆಯಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಂಡು ಸಾಧನೆ ಮಾಡಬೇಕು ಎಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಚಂದನ್ ಗೌಡ, ಯೋಗೀಶ್, ಆಯೋಜಕರಾದ ಭಸಂತ್, ಮಹೇಶ್ ಸೇರಿದಂತೆ ಮುಖಂಡರು, ಯುವಕರು ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.



ನಂಜನಗೂಡು : ತಾಲ್ಲೂಕು ಪಂಚಾಯಿತಿಯ ಶಾಸಕರ ಕಚೇರಿಯಲ್ಲಿ ನಂಜನಗೂಡು ಕ್ಷೇತ್ರದ ಜನಪ್ರಿಯ ಯುವ ಶಾಸಕರಾದ ದರ್ಶನ್ ಧ್ರುವನಾರಾಯಣ್ ಅವರು ಜನತಾ ದರ್ಶನ ನಡೆಸಿ, ಸಾರ್ವಜನಿಕರು, ಮುಖಂಡರು ಹಾಗೂ ಕಾರ್ಯಕರ್ತರಿಂದ ಅಹವಾಲುಗಳನ್ನು ಸ್ವೀಕರಿಸಿ, ಸಮಸ್ಯೆಗಳನ್ನು ಆಲಿಸಲಾಯಿತು. ಸಂಬಂಧಿತ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿ, ಶೀಘ್ರ ಪರಿಹಾರಕ್ಕೆ ನಿರ್ದೇಶಿಸಿದರು.

# ಒಂದೇ ದಿನ 830 ಕೋಳಿಗಳ ನಿಗೂಢ ಸಾವು ದುಷ್ಕರ್ಮಿಗಳ ಕೈವಾಡದ ಶಂಕೆ

ದಾವಣಗೆರೆ: ಒಂದೇ ದಿನ ಇದ್ದಕ್ಕಿದ್ದಂತೆ 830 ನಾಟಿ ಕೋಳಿಗಳು ನಿಗೂಢವಾಗಿ ಸಾವನ್ನಪ್ಪಿದ ಘಟನೆ ದಾವಣಗೆರೆ ತಾಲೂಕಿನ ರಾಮಗೊಂಡನಹಳ್ಳಿಯಲ್ಲಿ ನಡೆದಿದೆ. ಪ್ರಕಾಶ್ ಹಾಗೂ ಅರ್ಜುನ್ ಎಂಬ ರೈತರಿಗೆ ಸೇರಿದ ನಾಟಿ ಕೋಳಿ ಸಾವನ್ನಪ್ಪಿವೆ. ಕೋಳಿಗಳಿಗೆ ಯಾವುದೇ ರೋಗ ಕೂಡಾ ಇರಲಿಲ್ಲ. ಜೊತೆಗೆ ಆಹಾರ ನೀಡುವಲ್ಲಿ ವ್ಯತ್ಯಾಸ ಆಗಿಲ್ಲ. ಬೆಳಗಾಗುವಷ್ಟರಲ್ಲಿ ನೂರಾರು ಕೋಳಿಗಳ ಸಾವನ್ನಪ್ಪಿದ್ದು, ದುಷ್ಕರ್ಮಿಗಳ ಕೈವಾಡದ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ಪಶು ವೈದ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪಶು ವೈದ್ಯಾಧಿಕಾರಿಗಳು ಮಾದರಿ ಸಂಗ್ರಹಿಸಿದ್ದು, ವರದಿಯಿಂದ ಸಾವಿಗೆ ನಿಖರ ಕಾರಣ ತಿಳಿಯಬೇಕಿದೆ.



**ಪ್ರಿಯ ಓದುಗರೆ ನಿಮ್ಮ ಪ್ರೀತಿಯ ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿ ಪ್ರೋತ್ಸಾಹಿಸಿ**

# ಶ್ರೀರಾಘವೇಂದ್ರ ತೀರ್ಥ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವ ಸಂಪನ್ನ

ಬಳ್ಳಾರಿ: ಕಲಿಯುಗದ ಕಲ್ಪವೃಕ್ಷ, ಕಾಮಧೇನು ಎಂದೇ ಭಕ್ತರಿಂದ ಆರಾಧಿಸಲ್ಪಡುವ ಶ್ರೀರಾಘವೇಂದ್ರ ತೀರ್ಥ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವವು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಮೂರು ದಿನಗಳ ಕಾಲ ಅತ್ಯಂತ ವೈಭವ ಹಾಗೂ ಭಕ್ತಿಭಾವದಿಂದ ನೆರವೇರಿತು. ಸೋಮವಾರ ಉತ್ತರಾರಾಧನೆ ಅಂಗವಾಗಿ ನಗರದ ಸತ್ಯನಾರಾಯಣಪೇಟೆಯ ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಅದ್ದೂರಿ ರಥೋತ್ಸವ ನಡೆಯಿತು.

ಶ್ರೀಮಠದ ಪ್ರಧಾನ ವ್ಯವಸ್ಥಾಪಕ ಪಂ. ಪ್ರಸನ್ನಾಚಾರ ಐ.ಜಿ. ಅವರ ನೇತೃತ್ವದಲ್ಲಿ ನೂತನ ಬ್ರಹ್ಮರಥೋತ್ಸವವನ್ನು ವಿಜೃಂಭಣೆಯಿಂದ ನೆರವೇರಿಸಲಾಯಿತು. ನಗರ ಸೇರಿದಂತೆ ವಿವಿಧೆಡೆಯಿಂದ ಆಗಮಿಸಿದ್ದ ಸಾವಿರಾರು ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡು ಗುರುರಾಯರಿಗೆ ಭಕ್ತಿ ಸಮರ್ಪಿಸಿದರು.

ಸಾಮೂಹಿಕ ಭಜನೆ, ಡೊಳ್ಳು ಕುಣಿತ ಹಾಗೂ ವಿವಿಧ ಕಲಾ ತಂಡಗಳ ಪ್ರದರ್ಶನದೊಂದಿಗೆ ರಥವು ಶ್ರೀಮಠದಿಂದ ಶ್ರೀರಾಘವೇಂದ್ರ ವೃತ್ತ, ಕೂಲ್ ಕಾರ್ನರ್, ಪಾಂಡುರಂಗ ಆಸ್ಪತ್ರೆ, ನಾಗಮ್ಮ ಬಾಡಿ ಶಾಲೆ, ಉತ್ತರಾಧಿಮಠದ ಮಾರ್ಗವಾಗಿ ಸಂಚರಿಸಿ ಮರಳಿ ಶ್ರೀಮಠವನ್ನು ತಲುಪಿತು. ಶ್ರೀ ಆಂಜನೇಯ ಹಾಗೂ ಶ್ರೀರಾಮನ ವೇಷಧಾರಿಗಳು ರಥೋತ್ಸವದ ಪ್ರಮುಖ ಆಕರ್ಷಣೆಯಾಗಿದ್ದರು.

ಉತ್ತರಾಧಿಮಠದ ಬಳಿ ಪಂ. ನವೀನ್ ಆಚಾರ ಹಾಗೂ ಪಂ. ಪ್ರವೀಣ್ ಆಚಾರ ಅವರು ರಥೋತ್ಸವಕ್ಕೆ ಮಂಗಳಾರತಿ ನೆರವೇರಿಸಿ ಭಕ್ತಿ ಸಮರ್ಪಿಸಿದರು. ಬಳಿಕ ಪಂ. ಪ್ರಸನ್ನಾಚಾರ ಐ.ಜಿ. ಹಾಗೂ ಪಂ. ಗುರುರಾಜ ಆಚಾರ್ಯ ಅವರು ಭಕ್ತರಿಗೆ ಮಂತ್ರಾಕ್ಷತೆ ಹಾಗೂ ಪ್ರಸಾದ ವಿತರಿಸಿದರು.



ವಿಶೇಷ ಪೂಜೆ

ಉತ್ತರಾರಾಧನೆ ಅಂಗವಾಗಿ ಶ್ರೀಮಠದಲ್ಲಿ ಬೆಳಗ್ಗೆಯಿಂದಲೇ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಪಂ. ಪ್ರಸನ್ನಾಚಾರ ಐ.ಜಿ. ಅವರ ನೇತೃತ್ವದಲ್ಲಿ ಸುಪ್ರಭಾತ, ನಿರ್ಮಾಲ್ಯ ವಿಸರ್ಜನೆ, ವೇದ ಪಾರಾಯಣ, ಅಷ್ಟೋತ್ತರ ಪಾರಾಯಣ, ಗುರುರಾಯರಿಗೆ ಪಂಚಾಮೃತಾಭಿಷೇಕ, ಕನಕ ಮಹಾಪೂಜೆ, ಅರ್ಚನೆ, ವಿಶೇಷ ಅಲಂಕಾರ, ಹಸ್ತೋದಕ ಹಾಗೂ ಮಹಾಮಂಗಳಾರತಿ ಸೇರಿದಂತೆ ವಿವಿಧ ಪೂಜಾ ವಿಧಿವಿಧಾನಗಳು ನೆರವೇರಿದವು.

ಕಾರ್ಯಕ್ರಮದಲ್ಲಿ ಬ್ರಾಹ್ಮಣ ಸಮಾಜದ ಮುಖಂಡರು, ಗಣ್ಯರು, ವಿವಿಧ ಭಜನಾ ಮಂಡಳಿಗಳ ಸದಸ್ಯರು ಹಾಗೂ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು. ಆರಾಧನಾ ಮಹೋತ್ಸವದ ಹಿನ್ನೆಲೆಯಲ್ಲಿ ಶ್ರೀಮಠದಲ್ಲಿ ದಿನವಿಡೀ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು.

# ಪವನ್ ಕಲ್ಯಾಣ ಹುಟ್ಟುಹಬ್ಬ ಆಚರಣೆ




ಬಳ್ಳಾರಿ: ಜನಸೇನಾ ಪಕ್ಷದ ಮುಖ್ಯಸ್ಥ ಕೊಣಿದಲ ಪವನ್ ಕಲ್ಯಾಣ ಅವರ ಹುಟ್ಟುಹಬ್ಬದ ಅಂಗವಾಗಿ 'ಒಂದು ದಿನದ ಸಂಭ್ರಮವಲ್ಲ, 365 ದಿನಗಳ ಜನಸೇವೆಯೇ ನಮ್ಮ ಸಂಕಲ್ಪ' ಎಂಬ ಧ್ಯೇಯದೊಂದಿಗೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಪಕ್ಷದ ಬಳ್ಳಾರಿ ಸಾಧಕ ರವಿ ಭಾರತೀಯ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತಿಗಳನ್ನು ಒಗ್ಗೂಡಿಸುವ ಚಿಂತನಾ ವಿಧಾನ, ಧರ್ಮಗಳ ಪ್ರಸ್ತಾಪವಿಲ್ಲದ ರಾಜಕೀಯ, ಎಲ್ಲ ಭಾಷೆಗಳ ಗೌರವ, ಸಂಸ್ಕೃತಿಗಳ ಸಂರಕ್ಷಣೆ, ಪ್ರಾದೇಶಿಕತೆಯನ್ನು ಮರೆಯದ ರಾಷ್ಟ್ರೀಯತೆ, ಭ್ರಷ್ಟಾಚಾರದ ವಿರುದ್ಧ ರಾಜಿಯಿಲ್ಲದ ಹೋರಾಟ ಹಾಗೂ ಪರಿಸರ ಸಂರಕ್ಷಣೆಯೊಂದಿಗೆ ಅಭಿವೃದ್ಧಿ ಸೇರಿದಂತೆ ಏಳು ಮೂಲ ಸಿದ್ಧಾಂತಗಳನ್ನು ಜನಸೇನಾ ಪಕ್ಷ ಹೊಂದಿದೆ ಎಂದರು.

ಪವನ್ ಕಲ್ಯಾಣ ಅವರ ಹುಟ್ಟುಹಬ್ಬದ ಅಂಗವಾಗಿ ಜನಸೇವಾ ಕೇಂದ್ರ ಉದ್ಘಾಟನೆ, ಉಚಿತ ಕಣ್ಣಿನ ತಪಾಸಣೆ ಹಾಗೂ ಅಗತ್ಯವಿರುವವರಿಗೆ ಶಸ್ತ್ರಚಿಕಿತ್ಸೆ, ಉಚಿತ ವೈದ್ಯಕೀಯ ತಪಾಸಣೆ ಮತ್ತು ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗುವುದು. ಹೃದಯ, ಕ್ಯಾನ್ಸರ್, ನರ, ಮೂತ್ರಪಿಂಡ, ಮೂಳೆ ಮತ್ತು ಕೀಲು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ತಪಾಸಣೆ ಹಾಗೂ ಚಿಕಿತ್ಸಾ ಸೇವೆಗಳನ್ನು ಒದಗಿಸುವ ಉದ್ದೇಶವಿದೆ ಎಂದು ಹೇಳಿದರು. ಕಾರ್ಯಕ್ರಮಗಳ ಉದ್ಘಾಟನೆಯ ಅಂಗವಾಗಿ ಸೆಪ್ಟೆಂಬರ್ 2ರಂದು ಬಳ್ಳಾರಿಯ ದುರ್ಗಮ್ಮ ದೇವಸ್ಥಾನ ಸಮೀಪದಿಂದ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ. ಇದೇ ಸಂದರ್ಭದಲ್ಲಿ ಪೂಜಾ ಕಾರ್ಯಕ್ರಮಗಳನ್ನೂ ಆಯೋಜಿಸಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಹಕರಿಸುವಂತೆ ಮನವಿ ಮಾಡಿದರು.

ಹೊಸ ಕೆಎಸ್‌ಆರ್‌ಡಿಪಿ ಬಸ್ ನಿಲ್ದಾಣದ ಬಳಿಯ ಸರ್.ಎಂ. ವಿಶ್ವೇಶ್ವರಯ್ಯ ಲಾರಿ ಟರ್ಮಿನಲ್ ಆವರಣದಲ್ಲಿ ವೈದ್ಯಕೀಯ ತಪಾಸಣೆ ಮತ್ತು ಚಿಕಿತ್ಸಾ ಜನಸೇವಾ ಕಾರ್ಯಕ್ರಮಗಳು ನಡೆಯಲಿವೆ. ಮುಂದಿನ ದಿನಗಳಲ್ಲಿ ಬಳ್ಳಾರಿಯಲ್ಲಿ ಪಕ್ಷದ ಉದ್ಘಾಟನೆ, ಪಕ್ಷ ಸೇರ್ಪಡೆ ಕಾರ್ಯಕ್ರಮ ಹಾಗೂ ಜಿಲ್ಲಾ ಕಚೇರಿ ಉದ್ಘಾಟನೆ ನಡೆಯಲಿದೆ ಎಂದು ರವಿ ಭಾರತೀಯ ತಿಳಿಸಿದರು.

'ಜನರಿಂದ, ಜನರಿಗಾಗಿ ಮತ್ತು ಜನರಿಗೋಸ್ಕರ' ಎಂಬ ಆಶಯದೊಂದಿಗೆ ಪಕ್ಷವು ಜನಪರ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಿದೆ. ವೈದ್ಯಕೀಯ ಸೇವೆ ಹಾಗೂ ಇತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಆಸಕ್ತರು 9606058266 ಸಂಖ್ಯೆಗೆ ಸಂಪರ್ಕಿಸಬಹುದು ಎಂದರು.

ಸುದ್ದಿಗೋಷ್ಠಿಯಲ್ಲಿ ವೆಂಕಟೇಶ್, ತಿಪ್ಪೇಸ್ವಾಮಿ, ರಾಘವೇಂದ್ರ, ಪದ್ಮಾವತಿ, ಶಾಂತಿ, ಸಂತೋಷ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# 'ಟ್ಯಾಬ್ ಸಂಡೂರು ಡಿಜಿಟಲ್ ಸ್ಟುಡಿಯೊ' ಉದ್ಘಾಟನೆ

ಸಂಡೂರು/ ಬಳ್ಳಾರಿ: ಗ್ರಾಮೀಣ ಪ್ರದೇಶದ ಮಕ್ಕಳಿಗೂ ಗುಣಮಟ್ಟದ ಹಾಗೂ ಪರಿಣಾಮಕಾರಿ ಶಿಕ್ಷಣ ಒದಗಿಸುವ ನಿಟ್ಟಿನಲ್ಲಿ ತಂತ್ರಜ್ಞಾನವನ್ನು ಶಿಕ್ಷಣದೊಂದಿಗೆ ಸಮನ್ವಯಗೊಳಿಸುವುದು ಅಗತ್ಯವಾಗಿದೆ. ಏಕರೂಪ ಶಿಕ್ಷಣಕ್ಕೆ ಡಿಜಿಟಲ್ ಸ್ಟುಡಿಯೊ ಬಹಳಷ್ಟು ಅನುಕೂಲವಾಗಲಿದ್ದು, ಇದರ ಮೂಲಕ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಕಲಿಕಾ ಮಟ್ಟವನ್ನು ಮತ್ತಷ್ಟು ಹೆಚ್ಚಿಸಲು ಸಾಧ್ಯವಾಗಲಿದೆ ಎಂದು ಸಂಡೂರು ವಿಧಾನಸಭಾ ಕ್ಷೇತ್ರದ ಶಾಸಕಿ ಅನ್ನಪೂರ್ಣ ಈ. ತುಕಾರಾಂ ಹೇಳಿದರು.

ಪಟ್ಟಣದ ಗುರುನಾಥರಾವ್ ಪ್ರಾಚಾರ್ಯರ ಗುರುಭವನ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಆಯೋಜಿಸಿದ್ದ 2024–25ನೇ ಸಾಲಿನ ಎನ್‌ಎಂಡಿಸಿ ಸಂಸ್ಥೆಯ ಸಿಎಸ್‌ಆರ್ ಅನುದಾನದ 40 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ 'ಟ್ಯಾಬ್ ಸಂಡೂರು ಡಿಜಿಟಲ್ ಸ್ಟುಡಿಯೊ' ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲೇ ಪ್ರಥಮ ಬಾರಿಗೆ ಸಂಡೂರಿನಲ್ಲಿ ಡಿಜಿಟಲ್ ಸ್ಟುಡಿಯೊ ಸ್ಥಾಪಿಸಲಾಗಿದ್ದು, ತಂತ್ರಜ್ಞಾನದ ನೆರವಿನಿಂದ ಇಂಟರ್‌ನೆಟ್ ಮೂಲಕ ನುರಿತ ವಿಷಯ ಶಿಕ್ಷಕರಿಂದ ಪಾಠ ಬೋಧನೆ ಮಾಡಿಸಲಾಗುವುದು. ಈ ಪಾಠಗಳು ಏಕಕಾಲದಲ್ಲಿ ವಿವಿಧ ಶಾಲೆಗಳಿಗೆ ಪ್ರಸಾರವಾಗುವ ಮೂಲಕ ವಿದ್ಯಾರ್ಥಿಗಳಿಗೆ ಒಂದೇ ಗುಣಮಟ್ಟದ ಬೋಧನೆ ದೊರೆಯಲಿದೆ. ಇದರಿಂದ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚುವುದರ ಜೊತೆಗೆ ಶೈಕ್ಷಣಿಕ ಫಲಿತಾಂಶವೂ ಸುಧಾರಿಸಲಿದೆ ಎಂದು ಶಾಸಕಿ ತಿಳಿಸಿದರು.



ಶಿಕ್ಷಕರು ತಮ್ಮ ಬೋಧನಾ ಸಾಮರ್ಥ್ಯವನ್ನು ನಿರಂತರವಾಗಿ ಅಭಿವೃದ್ಧಿಪಡಿಸಿಕೊಳ್ಳಬೇಕು. ಶಿಕ್ಷಕ ತಾನೇ ಮೊದಲು ವಿದ್ಯಾರ್ಥಿಯಾಗಿ ಕಲಿತುಕೊಂಡ ಬಳಿಕ ಮಕ್ಕಳಿಗೆ ಪಾಠ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು. ಆಗ ಮಾತ್ರ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಸಮರ್ಥವಾಗಿ ಉತ್ತರಿಸಲು ಸಾಧ್ಯವಾಗುತ್ತದೆ ಎಂದು ಅನ್ನಪೂರ್ಣ ತುಕಾರಾಂ ಹೇಳಿದರು.

ಮಕ್ಕಳನ್ನು ಸಮಾಜದ ದೊಡ್ಡ ಆಸ್ತಿಯನ್ನಾಗಿ ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕರ ಸಹಯೋಗದೊಂದಿಗೆ ಹಲವು ಯೋಜನೆಗಳನ್ನು ರೂಪಿಸಲಾಗುತ್ತಿದೆ. ಸಮಾಜವನ್ನು ತಿದ್ದುವ ಶಕ್ತಿ ಶಿಕ್ಷಕರಲ್ಲಿದ್ದು, ಅವರು ಮಕ್ಕಳ ಉಜ್ವಲ ಭವಿಷ್ಯ ರೂಪಿಸುವತ್ತ ಹೆಚ್ಚಿನ ಗಮನಹರಿಸಬೇಕು. ತಂದೆ–ತಾಯಿಯರ ಸಂಸ್ಕಾರ, ಗುರು–ಹಿರಿಯರಿಗೆ ಗೌರವ ನೀಡುವ ಗುಣ ಹಾಗೂ ಮಾನವೀಯ ಮೌಲ್ಯಗಳೊಂದಿಗೆ ತಂತ್ರಜ್ಞಾನಾಧಾರಿತ ಗುಣಮಟ್ಟದ ಶಿಕ್ಷಣ ನೀಡುವುದು ಇಂದಿನ ಅಗತ್ಯವಾಗಿದೆ ಎಂದರು.

ಡಿಜಿಟಲ್ ಸ್ಟುಡಿಯೊ ಕೇವಲ ಸರ್ಕಾರಿ ಶಾಲೆಗಳಿಗೆ ಸೀಮಿತವಾಗಿಲ್ಲ. ಅನುದಾನ ರಹಿತ ಶಾಲೆಗಳೂ ಇದರ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದರು.

# ವಸತಿ ರಹಿತ, ನಿವೇಶನ ರಹಿತ ಅರ್ಹರಿಗೆ ಗುಡ್‌ನ್ಯೂಸ್: ಸೆ.30ರವರೆಗೆ ನೋಂದಣಿಗೆ ಕಾಲಾವಕಾಶ ವಿಸ್ತರಣೆ

ಬಳ್ಳಾರಿ: 2018ರ ವಸತಿ ರಹಿತ ಹಾಗೂ ನಿವೇಶನ ರಹಿತರ ಸಮೀಕ್ಷಾ ಪಟ್ಟಿಯಿಂದ ಹೊರಗುಳಿದಿರುವ ಅರ್ಹ ಫಲಾನುಭವಿಗಳನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಸೆಪ್ಟೆಂಬರ್ 30, 2026ರವರೆಗೆ ವಿಸ್ತರಿಸಲಾಗಿದೆ. 2018ರ ಸಮೀಕ್ಷಾ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗದೆ ವಸತಿ ಸೌಲಭ್ಯದಿಂದ ವಂಚಿತರಾಗಿರುವ ಅರ್ಹ ಫಲಾನುಭವಿಗಳು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬೇಕು ಎಂದು ಸಂಡೂರು ತಾಲೂಕು ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಡಗಿನ ಬಸಪ್ಪ ಸೂಚಿಸಿದ್ದಾರೆ. ಸರ್ಕಾರದ "ಪ್ರತಿಯೊಬ್ಬರಿಗೂ ಸೂರು" ಎಂಬ ಆಶಯದಡಿ ಅರ್ಹ ವಸತಿ ರಹಿತ ಹಾಗೂ ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಈ ಅವಕಾಶ ನೀಡಲಾಗಿದೆ.

# ಕಂಪ್ಲಿ ವಲಯ-1ರ ಶಾಲಾ ಕ್ರೀಡಾಕೂಟಕ್ಕೆ ಚಾಲನೆ

ಕಂಪ್ಲಿ: ಪಟ್ಟಣದ ಷಾಮಿಯಾಚಂದ್ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಬಳ್ಳಾರಿ ಶಿಕ್ಷಣ ಇಲಾಖೆ ಹಾಗೂ ಕುರುಗೋಡು ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳ ಸಹಯೋಗದಲ್ಲಿ ಆಯೋಜಿಸಿದ್ದ ಕಂಪ್ಲಿ ವಲಯ-1ರ ವಲಯ ಮಟ್ಟದ ಪ್ರಾಥಮಿಕ ಶಾಲಾ ಮಕ್ಕಳ ಎರಡು ದಿನಗಳ ಕ್ರೀಡಾಕೂಟಕ್ಕೆ ಸೋಮವಾರ ಚಾಲನೆ ನೀಡಲಾಯಿತು.

ಎನ್‌ಪಿಎಸ್ ರಾಜ್ಯಾಧ್ಯಕ್ಷ ನಾಗನಗೌಡ ಎಂ.ಎ., ಇಸಿಒ ರೇವಣ್ಣ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಹನುಮಂತಪ್ಪ ಕ್ರೀಡಾಜ್ಯೋತಿ ಬೆಳಗಿಸುವ ಮೂಲಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ಕ್ರೀಡಾಕೂಟದ ಕಾರ್ಯದರ್ಶಿ ರಮೇಶ ಶಿವಪುರ ಮಾತನಾಡಿ, ಮಕ್ಕಳು ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ಕ್ರೀಡೆ ವಿದ್ಯಾರ್ಥಿಗಳಲ್ಲಿ ಶಿಸ್ತು, ಆತ್ಮವಿಶ್ವಾಸ ಹಾಗೂ ಕ್ರೀಡಾ ಮನೋಭಾವ ಬೆಳೆಸುತ್ತದೆ. ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕ್ರೀಡಾಕೂಟದಲ್ಲಿ ಎಸ್‌ಎನ್‌ಪೇಟೆ ಹಾಗೂ 8ನೇ ವಾರ್ಡ್ ಕ್ಲಸ್ಟರ್‌ನ ಶಾಲಾ ಮಕ್ಕಳು ಕಬಡ್ಡಿ, ಖೋ-ಖೋ, ಥ್ರೋಬಾಲ್ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ಉತ್ಸಾಹದಿಂದ ಭಾಗವಹಿಸಿದರು.



ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಹೆಚ್. ಜಡೆಪ್ಪ, ಜೋಗಿ ರುದ್ರಪ್ಪನಾಯಕ್, ಕ್ರೀಡಾಕೂಟದ ಅಧ್ಯಕ್ಷ ವೆಂಕಟರಮಣ, ಸಿಆರ್‌ಪಿಗಳಾದ ರೇಣುಕಾರಾಧ್ಯ, ಗಂಗಾಧರ, ಕರುಣಾಕರ, ಪ್ರಭಾಕರ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


**ಕಬಡ್ಡಿ-ಖೋ-ಖೋ-ಥ್ರೋಬಾಲ್**

**ಕಂಪ್ಲಿ ವಲಯ-1ರ ಪ್ರಾಥಮಿಕ ಶಾಲಾ ಮಕ್ಕಳ ಎರಡು ದಿನಗಳ ಕ್ರೀಡಾಕೂಟದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು. ಕ್ರೀಡೆಯ ಮೂಲಕ ಮಕ್ಕಳಲ್ಲಿ ಶಿಸ್ತು, ಆತ್ಮವಿಶ್ವಾಸ, ಪ್ರತಿಭೆ ಹಾಗೂ ಕ್ರೀಡಾ ಮನೋಭಾವ ಬೆಳೆಸುವ ಉದ್ದೇಶದಿಂದ ಕ್ರೀಡಾಕೂಟ ಆಯೋಜಿಸಲಾಗಿದೆ.**

# ಕುಡಿದು ಕರ್ತವ್ಯ ನಿರ್ವಹಿಸಿದ ಲೈನ್‌ಮ್ಯಾನ್: ಕ್ರಮಕ್ಕೆ ಆಗ್ರಹ

ರೋಣ: ಕರ್ತವ್ಯದ ವೇಳೆಯಲ್ಲಿ ಹೆಸ್ಕಾಂ ಸಮವಸ್ತ್ರ ಧರಿಸಿ ಮದ್ಯದ ಅಮಲಿನಲ್ಲಿ ತೂರಾಡುತ್ತಿದ್ದ ಎನ್ನಲಾದ ಕಿರಿಯ ಪವರ್‌ಮ್ಯಾನ್ ವಿರುದ್ಧ ಮಾಧ್ಯಮಗಳಲ್ಲಿ ವರದಿ ಪ್ರಕಟವಾದರೂ ಇದುವರೆಗೆ ಕಠಿಣ ಶಿಸ್ತು ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಕಳೆದ ಮಾರ್ಚ್ 12ರಂದು ರೋಣ ತಾಲೂಕಿನ ಬೆಳವಣಿಕಿ ವ್ಯಾಪ್ತಿಯಲ್ಲಿ ಕರ್ತವ್ಯದಲ್ಲಿದ್ದ ಎಸ್.ಬಿ. ಹುಬ್ಬಳ್ಳಿ ಎಂಬ ಕಿರಿಯ ಪವರ್‌ಮ್ಯಾನ್ ಮದ್ಯದ ಅಮಲಿನಲ್ಲಿ ಸಮವಸ್ತ್ರ ಧರಿಸಿ ಓಡಾಡುತ್ತಿದ್ದ ದೃಶ್ಯಗಳು ಮಾಧ್ಯಮಗಳಲ್ಲಿ ವರದಿಯಾಗಿದ್ದವು. ಈ ಕುರಿತು ವರದಿಯಾದ ಬಳಿಕವೂ ಹೆಸ್ಕಾಂನ ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳದೆ ಮೌನ ವಹಿಸಿರುವುದಾಗಿ ಆರೋಪಿಸಲಾಗಿದೆ.




ವಿದ್ಯುತ್ ಇಲಾಖೆಯಂತಹ ಅಪಾಯಕಾರಿ ಕ್ಷೇತ್ರದಲ್ಲಿ ಮದ್ಯಪಾನ ಮಾಡಿ ಕರ್ತವ್ಯ ನಿರ್ವಹಿಸುವುದು ಸಾರ್ವಜನಿಕರ ಸುರಕ್ಷತೆಗೂ ಅಪಾಯ ಉಂಟುಮಾಡಬಹುದು. ಹೀಗಾಗಿ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನುಬದ್ಧ ಹಾಗೂ ಇಲಾಖಾ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಮಾಧ್ಯಮ ವರದಿಗಳ ಬಳಿಕವೂ ಕ್ರಮ ಕೈಗೊಳ್ಳದಿರುವ ಕುರಿತು ಹೆಸ್ಕಾಂ ಮೇಲಧಿಕಾರಿಗಳ ಕಾರ್ಯವೈಖರಿ ಪ್ರಶ್ನಾರ್ಹವಾಗಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿದ್ದು, ಇಲಾಖೆಯು ಈ ಬಗ್ಗೆ ಸ್ಪಷ್ಟನೆ ನೀಡಬೇಕೆಂಬ ಒತ್ತಾಯವೂ ಕೇಳಿಬಂದಿದೆ.

# ಕೊಟ್ಟೂರು-ಕೂಡ್ಲಿಗಿ ಬರಪೀಡಿತ ತಾಲೂಕು ಘೋಷಣೆಗೆ ರೈತರ ಪ್ರತಿಭಟನೆ



**ಪ್ರದೇಶಗಳೆಂದು ಘೋಷಿಸಬೇಕು**

- ಎರಡೂ ತಾಲೂಕುಗಳಲ್ಲಿ ಮತ್ತೊಮ್ಮೆ ಜಂಟಿ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು
- ರೈತರಿಗೆ ಪ್ರತಿ ಎಕರೆಗೆ 30 ಸಾವಿರ ಬೆಳೆ ನಷ್ಟ ಪರಿಹಾರ ನೀಡಬೇಕು
- ರೈತರ ಕೃಷಿ ಸಾಲ ಮನ್ನಾ ಮಾಡಬೇಕು ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು
- ಬೇಡಿಕೆ ಈಡೇರದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು

ಕೊಟ್ಟೂರು: ಕೊಟ್ಟೂರು ಹಾಗೂ ಕೂಡ್ಲಿಗಿ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿ, ರೈತರಿಗೆ ಸೂಕ್ತ ಬೆಳೆ ನಷ್ಟ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ (ವಾಸುದೇವ ಮೇಟಿ ಬಣ) ಹಾಗೂ ಹಸಿರು ಸೇನೆ ವತಿಯಿಂದ ಕೊಟ್ಟೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಸಂಘದ ವಿಜಯನಗರ ಜಿಲ್ಲಾಧ್ಯಕ್ಷ ಸಿ.ಎ. ಗಾಳೇಪ್ಪ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ವಿಜಯನಗರ ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಮಳೆ ಕೊರತೆ-ಯಾಗಿದ್ದು, ವಿಶೇಷವಾಗಿ ಕೊಟ್ಟೂರು ಹಾಗೂ ಕೂಡ್ಲಿಗಿ ತಾಲೂಕುಗಳಲ್ಲಿ ಸಕಾಲಕ್ಕೆ ಮಳೆಯಾಗದೆ ಮೆಕ್ಕೆಜೋಳ, ಸಜ್ಜೆ, ತೊಗರಿ, ರಾಗಿ ಹಾಗೂ ಹತ್ತಿ ಸೇರಿದಂತೆ ವಿವಿಧ ಬೆಳೆಗಳು ಹಾನಿಗೊಳಗಾಗಿವೆ ಎಂದು ರೈತರು ತಿಳಿಸಿದರು.

ಸಂಬಂಧಪಟ್ಟ ಅಧಿಕಾರಿಗಳಿಂದ ನಡೆದ ಬೆಳೆ ಹಾನಿ ಸಮೀಕ್ಷೆ ಸಮರ್ಪಕವಾಗಿಲ್ಲ ಎಂಬ ಆರೋಪ ಕೇಳಿಬಂದಿದ್ದು, ಎರಡೂ ತಾಲೂಕುಗಳಲ್ಲಿ ಮತ್ತೊಮ್ಮೆ ಜಂಟಿ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು ಎಂದು ಒತ್ತಾಯಿಸಿದರು. ಇತ್ತೀಚೆಗೆ ಸರ್ಕಾರ ಪ್ರಕಟಿಸಿರುವ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಕೊಟ್ಟೂರು ಹಾಗೂ ಕೂಡ್ಲಿಗಿಯನ್ನು ಕೈಬಿಟ್ಟಿರುವುದು ರೈತರಲ್ಲಿ ಆತಂಕ ಮೂಡಿಸಿದೆ ಎಂದು ಪ್ರತಿಭಟನಾಕಾರರು ಹೇಳಿದರು.

ರೈತರಿಗೆ ಪ್ರತಿ ಎಕರೆಗೆ 30 ಸಾವಿರ ಬೆಳೆ ನಷ್ಟ ಪರಿಹಾರ ನೀಡಬೇಕು, ಕೃಷಿ ಸಾಲ ಮನ್ನಾ ಮಾಡಬೇಕು ಹಾಗೂ ಜಾನುವಾರುಗಳಿಗೆ ಅಗತ್ಯ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಸೆ.5ರಂದು ಕೂಡ್ಲಿಗಿಗೆ ಮುಖ್ಯಮಂತ್ರಿ ಆಗಮಿಸುವ ಸಂದರ್ಭದಲ್ಲಿ ಕೊಟ್ಟೂರು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸದಿದ್ದರೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು. ಸಮಸ್ಯೆ ಬಗೆಹರಿಯದಿದ್ದರೆ ಜಿಲ್ಲಾ ಮಟ್ಟದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಸಿ.ಎ. ಗಾಳೇಪ್ಪ ಎಚ್ಚರಿಸಿದರು.

ಪ್ರತಿಭಟನಾಕಾರರು ಬಸ್ ನಿಲ್ದಾಣದ ಮುಂಭಾಗ ಮಾನವ ಸರಪಳಿ ನಿರ್ಮಿಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಬಳಿಕ ಉಪತಹಶೀಲ್ದಾರ್ ಪ್ರತಿಭಾ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷೆ ಸಿ. ರೇಖಾ, ಕೊಟ್ಟೂರು ಹೋಬಳಿ ಘಟಕದ ಅಧ್ಯಕ್ಷೆ ಕೆ. ಪವಿತ್ರ, ಸಿದ್ದೇಶ್, ರೈತ ಮುಖಂಡರಾದ ನಾಗಮ್ಮ, ರೇಖಾ, ನಿಂಗಮ್ಮ, ರೇಣುಕಮ್ಮ, ಸಾಕಮ್ಮ, ಚಂದ್ರಮ್ಮ, ಸಿದ್ದಪ್ಪ, ಹನುಮಂತಪ್ಪ, ಅಂಜಿನಪ್ಪ ಸೇರಿದಂತೆ ವಿವಿಧ ಗ್ರಾಮಗಳ ರೈತರು ಹಾಗೂ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

# ಸಂತೂರ ತಂತಿಯಲ್ಲಿ ಹೊಮ್ಮಿದ ಭಾಗೇಶ್ರೀ; ಕಾಶಿನಾಥರ ಕಂಠದಲ್ಲಿ ಮಾರವಾ! ವಿಜಯಪುರದ ಸಂಗೀತ ಸಂಜೆ ಕಣ್ತುಂಬಿಕೊಂಡ ಕಲಾರಸಿಕರು

ವಿಜಯಪುರ, ಆ. 31: ಸಂತೂರಿನ ತಂತಿಗಳಿಂದ ಹೊಮ್ಮಿದ ಸುಮಧುರ ನಾದ, ಕಂಠದಿಂದ ಹೊರಹೊಮ್ಮಿದ ಶಾಸ್ತ್ರೀಯ ಸ್ವರಲಹರಿ... ರಾಗಗಳ ವೈವಿಧ್ಯಮಯ ಲೋಕದಲ್ಲಿ ಕಲಾರಸಿಕರನ್ನು ವಿಹರಿಸುವಂತೆ ಮಾಡಿದ ಅಪೂರ್ವ ಸಂಗೀತ ಸಂಜೆ ವಿಜಯಪುರದಲ್ಲಿ ನಡೆಯಿತು.

ನಗರದ ಕಂದಗಲ್ಲ ಹನುಮಂತರಾಯ ರಂಗಮಂದಿರದಲ್ಲಿ ಆ.30ರಂದು ಸುರಸಿಂಗಾರ ಕಲೆ ಮತ್ತು ಸಾಂಸ್ಕೃತಿಕ ಸಂಸ್ಥೆ (ರಿ.) ವತಿಯಿಂದ ಆಯೋಜಿಸಿದ್ದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಕಾರ್ಯಕ್ರಮಕ್ಕೆ ಸಂಗೀತಾಸಕ್ತರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಕಾರ್ಯಕ್ರಮದ ಮೊದಲ ಹಂತದಲ್ಲಿ ವಿಜಯಪುರದ ಯುವ ಹಿಂದೂಸ್ತಾನಿ ಶಾಸ್ತ್ರೀಯ ಗಾಯಕ ಕಾಶಿನಾಥ ಭೋಸಲೆ ಅವರು ರಾಗ ಮಾರವಾವನ್ನು ಭಾವಪೂರ್ಣವಾಗಿ ಪ್ರಸ್ತುತಪಡಿಸುವ ಮೂಲಕ ತಮ್ಮ ಗಾಯನ ಸಾಮರ್ಥ್ಯವನ್ನು ಅನಾವರಣಗೊಳಿಸಿದರು. ಅವರ ಸ್ವರಲಹರಿಗೆ ಮಾರುಹೋದ ಕಲಾರಸಿಕರು ಮೆಚ್ಚುಗೆ ವ್ಯಕ್ತಪಡಿಸಿದರು. ಬಳಿಕ ರಾಗ ಸೋಹನಿ, ಅಭಂಗ ಹಾಗೂ ವಚನಗಳನ್ನು ಹಾಡಿ ಸಂಗೀತಾಭಿಮಾನಿಗಳ ಮನಸೂರೆಗೊಂಡರು. ಕಾಶಿನಾಥ ಭೋಸಲೆ ಅವರಿಗೆ ಬಾಗಲಕೋಟೆಯ ಕುಮಾರಿ ಚಂದನಾ ಹಾರ್ಮೋನಿಯಂನಲ್ಲಿ, ವಿಜಯಪುರದ ಓಂಕಾರ ಅಳ್ಳಗಿ ತಬಲಾದಲ್ಲಿ ಹಾಗೂ ವಿಶಾಲಕಟ್ಟಿ ಮತ್ತು ಸುನಯನಾ ದೇಶಪಾಂಡೆ ತಾನಪುರಾದಲ್ಲಿ ಸಮರ್ಥ ಸಾಥ್ ನೀಡಿದರು. ಬಹುದಿನಗಳ ಬಳಿಕ ವಿಜಯಪುರದಲ್ಲಿ ಸಂತೂರ ವಾದನದ ಅಪೂರ್ವ ಅನುಭವ ಕಲಾರಸಿಕರಿಗೆ ದೊರೆಯಿತು. ಬೆಂಗಳೂರಿನ ಸುಮಾ ಹೆಗಡೆ ಅವರು ತಮ್ಮ ಮನೋಜ್ಞ ಸಂತೂರ ವಾದನದ ಮೂಲಕ ಸಂಗೀತ ಪ್ರಿಯರನ್ನು ಮಂತ್ರಮುಗ್ಧರನ್ನಾಗಿಸಿದರು. ರಾಗ ಭಾಗೇಶ್ರೀಯನ್ನು ವಿಸ್ತಾರವಾಗಿ ನುಡಿಸಿ ರಾಗದ ಭಾವವನ್ನು ಸಮರ್ಥವಾಗಿ ಕಟ್ಟಿಕೊಟ್ಟ ಅವರು, ನಂತರ ಪೀಲೂ ರಾಗದಲ್ಲಿ ಧುನ್ ನುಡಿಸುವ ಮೂಲಕ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದರು. ಸಂತೂರಿನ ತಂತಿಗಳಲ್ಲಿ ಮೂಡಿಬಂದ ಸುಮಧುರ ಸ್ವರಗಳು ರಂಗಮಂದಿರವನ್ನು ಸಂಗೀತದ ಅಲೆಯಲ್ಲಿ ತೇಲಿಸಿದವು. ಕೇರಳದ ಅರ್ಜುನ ಕಾಳಿಪ್ರಸಾದ್ ಅವರ ತಬಲಾ ಸಾಥ್ ಸಂತೂರಿನ ನಾದಕ್ಕೆ ಮತ್ತಷ್ಟು ಜೀವ ತುಂಬಿತು. ಕಾರ್ಯಕ್ರಮದಲ್ಲಿ ಸುರಸಿಂಗಾರ ಸಂಸ್ಥೆಯ ಪದಾಧಿಕಾರಿಗಳಾದ ಡಾ. ಸತೀಶ ಜಿಗಜಿನ್ನಿ, ಸಂಗಣ್ಣ ಪಾಟೀಲ, ಅರುಣ ಸೋಲಾಪುರಕರ, ವಿಶ್ವನಾಥ ಬೀಳಗಿ, ವೀರಭದ್ರ ಹೇರಲಗಿ, ತ್ರಿವೇಣಿ ಬೀಳಗಿ, ಡಾ. ಗೋಸಾವಿ, ಡಾ. ಸಿರಗುಪ್ಪಿ, ನೂರಾರು ಸಂಗೀತಾಸಕ್ತರು ಇದ್ದರು.

# ಒಳ್ಳೆಯ ವಿಚಾರಗಳನ್ನು ಸೇರಿಸಿ ನಾನೇ ಒಂದು ಧರ್ಮ ಯಾಕೆ ಮಾಡಬಾರದು?: ರಾಯರಡ್ಡಿ



ಯಲಬುರ್ಗಾ : ಇರುವ ಎಲ್ಲ ಒಳ್ಳೆಯ ವಿಚಾರಗಳನ್ನು ಸೇರಿಸಿ ನಾನೇ ಒಂದು ಧರ್ಮ ಯಾಕೆ ಮಾಡಬಾರದು ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಪ್ರಶ್ನಿಸಿದರು.

ತಾಲ್ಲೂಕಿನ ಬೋದೂರು ಗ್ರಾಮದಲ್ಲಿ ಸೋಮವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು 'ಮುಸ್ಲಿಂ, ಕ್ರಿಶ್ಚಿಯನ್ ಹೀಗೆ ಎಲ್ಲ ಧರ್ಮಗಳಿಗೂ ಹಿಂಬಾಲಕರು ಇದ್ದಾರೆ. ನನಗೆ ಯಾರೂ ಹಿಂಬಾಲಕರು ಇಲ್ಲವೆನ್ನುವ ಕಾರಣಕ್ಕೆ ಸುಮ್ಮನಿದ್ದೇನೆ. ಇಲ್ಲವಾದರೆ ನಾನೂ ಧರ್ಮ ಮಾಡುತ್ತಿದ್ದೆ. ಇದರ ಬಗ್ಗೆ ಗಂಭೀರವಾಗಿ ಯೋಚಿಸಬೇಕಿದೆ. ಎಲ್ಲ ಧರ್ಮಗಳಲ್ಲಿ ಒಳ್ಳೆಯ ವಿಚಾರಗಳಿದ್ದು ಅವುಗಳನ್ನು ಅನುಸರಿಸುವೆ. ಎಲ್ಲ ಧರ್ಮಗಳ ಸಾರಾಂಶವನ್ನೂ ಓದಿದ್ದೇನೆ' ಎಂದು ಹೇಳಿದರು.

ಮುಸ್ಲಿಂ ಹಾಗೂ ಇನ್ನಿತರ ಬೇರೆ ಧರ್ಮದವರನ್ನು ಹೊಗಳಿಸಿದರೆ ಬಿಜೆಪಿಯವರಿಗೆ ಸಹಿಸಲು ಆಗುವುದಿಲ್ಲ. ನಾನು ಯಾವುದೇ ಧರ್ಮದ ವಿರೋಧಿಯಲ್ಲ. ಇದನ್ನೇ ನೆಪ ಮಾಡಿಕೊಂಡು ರಾಜೀನಾಮೆ ಕೇಳುವವವರಿಗೆ ಒಳ್ಳೆಯದಾಗಲಿ' ಎಂದರು.

# ಬರ ಘೋಷಣೆಗೆ ಆಗ್ರಹಿಸಿ 'ಜೆನ್ ಝೀ' ಪ್ರತಿಭಟನೆ



ಗದಗ: ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸುವಂತೆ ಆಗ್ರಹಿಸಿ ಜೆನ್ ಝೀ ಮತದಾರರು ಹಾಗೂ ನಾಗರಿಕರ ವೇದಿಕೆಯಿಂದ ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.


ಇಲ್ಲಿನ ಚನ್ನಮ್ಮ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಜಿಲ್ಲಾಧಿಕಾರಿ ಕಚೇರಿವರೆಗೆ ಸಾಗಿತು. ಮಾರ್ಗಮಧ್ಯೆ ಮುಳಗುಂದ ನಾಕಾದಲ್ಲಿ ಮಾನವ ಸರಪಳಿ ನಿರ್ಮಿಸಿ, ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಜನಪ್ರತಿನಿಧಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಯಿತು.

ಇಡೀ ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸಿ, ಶೀಘ್ರ ಪರಿಹಾರ ಕಲ್ಪಿಸಬೇಕು. ಜಿಲ್ಲೆಗೆ ಮೂಲಸೌಕರ್ಯ ಒದಗಿಸಿ ಅಭಿವೃದ್ಧಿಪಡಿಸಬೇಕೆಂದು ಆಗ್ರಹಿಸಿ ಈಗಾಗಲೇ ಸಾವಿರಾರು ಜನರಿಂದ ರಕ್ತಸಹಿ ಸಂಗ್ರಹಿಸಲಾಗಿದೆ. 40,000 ಜನರ ರಕ್ತ ಸಹಿ ಸಂಗ್ರಹಿಸುವ ಗುರಿ ಇದೆ. ಇದನ್ನು ರಾಜ್ಯದ ಮುಖ್ಯಮಂತ್ರಿ ಹಾಗೂ ಪ್ರಧಾನಿ ಅವರಿಗೆ ಸಲ್ಲಿಸಲಾಗುತ್ತದೆ ಎಂದು ಮುಖಂಡರು ತಿಳಿಸಿದರು.

ನಾಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜಿಲ್ಲೆಗೆ ಭೇಟಿ ನೀಡಲಿದ್ದು, ಜಿಲ್ಲಾಧಿಕಾರಿ ಅವರು ಇಲ್ಲಿನ ಬರ ಪರಿಸ್ಥಿತಿ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಬರ ಘೋಷಣೆಗೆ ಮುಖ್ಯಮಂತ್ರಿ ಅವರು ಕೂಡಲೇ ಕ್ರಮವಹಿಸಬೇಕು. ಇಲ್ಲವಾದರೆ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು.

ವಿದ್ಯಾರ್ಥಿಗಳು, ಮಹಿಳೆಯರು, ರೈತ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ತುಂಗಭದ್ರಾ ನದಿಯಲ್ಲಿ ದೋಣಿ ಸಂಚಾರ ಪುನರಾರಂಭ



ಶಿರಹಟ್ಟಿ: ತಾಲೂಕಿನ ಗಡಿಯಂಚಿನ ಕಲ್ಲಾಗನೂರು - ಮಾಗಳ ನಡುವಿನ ತುಂಗಭದ್ರಾ ನದಿಯಲ್ಲಿ ಸ್ಥಗಿತಗೊಂಡಿದ್ದ ನಾಡದೋಣಿ ಸಂಚಾರ ದುರಸ್ತಿ ಕಾರ್ಯದ ಬಳಿಕ ಪುನರಾರಂಭಗೊಂಡಿದೆ. ಇದ-ರಿಂದ ಗದಗ, ವಿಜಯನಗರ ಹಾಗೂ ಹಾವೇರಿ ಜಿಲ್ಲೆಯ ಗಡಿಭಾಗದ ಗ್ರಾಮಗಳ ಸಾರ್ವಜನಿಕರು, ರೈತರು ಮತ್ತು ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ.

ಕಳೆದ ಹಲವು ತಿಂಗಳಿಂದ ದೋಣಿ ಕೆಟ್ಟು ನಿಂತಿದ್ದರಿಂದ ನದಿ ದಾಟಲು ಜನರು ತೀವ್ರ ತೊಂದರೆ ಅನುಭವಿಸುತ್ತಿದ್ದರು. ಇದೀಗ ದೋಣಿ ಸಂಚಾರ ಆರಂಭವಾಗಿರುವುದರಿಂದ ಜನರು ನಿಟ್ಟುಸಿರು ಬಿಟ್ಟಿದ್ದಾರೆ. ಆದರೆ ಸುರಕ್ಷಿತ ಸಂಚಾರಕ್ಕೆ ಅಗತ್ಯ ವ್ಯವಸ್ಥೆಗಳಿಲ್ಲದಿರುವುದು ಆತಂಕಕ್ಕೆ ಕಾರಣವಾಗಿದೆ.

ಕಲ್ಲಾಗನೂರು ಮಾಗಳ ನಡುವೆ ಸೇತುವೆ ನಿರ್ಮಿಸಬೇಕೆಂಬ ಬೇಡಿಕೆ 1972ರಿಂದಲೂ ಇದೆ. ಈ ಕುರಿತು ಹಲವು ಬಾರಿ ಹೋರಾಟಗಳು ನಡೆದಿದ್ದರೂ ಸೇತುವೆ ಕಾಮಗಾರಿ ಮಾತ್ರ ಆರಂಭವಾಗಿಲ್ಲ. ಈ ಭಾಗದ ಜನರ ಬಹುವರ್ಷದ ಬೇಡಿಕೆಗೆ ಸ್ಪಂದಿಸಿ ಸೇತುವೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯ ಮತ್ತೆ ಕೇಳಿಬಂದಿದೆ.

2023ರಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅವರು ಸೇತುವೆ ನಿರ್ಮಾಣಕ್ಕೆ 74 ಕೋಟಿ ಅನುದಾನ ಮಂಜೂರು ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದರು. ಬಳಿಕ ಸೂಕ್ತ ಸ್ಥಳ ಪರಿಶೀಲನೆ ನಡೆಸಿ ವರದಿ ಸಿದ್ಧಪಡಿಸಲಾಗಿದ್ದು, 2024ರ ಏಪ್ರಿಲ್‌ನಲ್ಲಿ ಕರ್ನಾಟಕ ನೀರಾವರಿ ನಿಗಮಕ್ಕೆ ವರದಿ ಸಲ್ಲಿಸಲಾಗಿದೆ.

ಸೇತುವೆ ನಿರ್ಮಾಣದ ಸ್ಥಳದ ಕುರಿತು ಜನಪ್ರತಿನಿಧಿಗಳ ನಡುವೆ ಭಿನ್ನಾಭಿಪ್ರಾಯದಿಂದ ಯೋಜನೆ ವಿಳಂಬವಾಗಿದೆ ಎಂಬ ಆರೋಪಗಳು ಕೇಳಿಬಂದಿವೆ. ಸದ್ಯ ಕಲ್ಲಾಗನೂರು ಬಳಿ ಸೇತುವೆ ನಿರ್ಮಾಣಕ್ಕೆ ಅಂತಿಮ ನಿರ್ಧಾರ ಕೈಗೊಳ್ಳಲಾಗಿದೆ ಎನ್ನಲಾಗಿದ್ದು, ಕಾಮಗಾರಿ ಶೀಘ್ರ ಆರಂಭಿಸಿ ಮೂರು ಜಿಲ್ಲೆಗಳ ಜನರ ಬಹುವರ್ಷದ ಬೇಡಿಕೆಯನ್ನು ಈಡೇರಿಸಬೇಕು

# ಸೆ. 6ಕ್ಕೆ ದೇಹದಾನ, ರಕ್ತದಾನ ಶಿಬಿರ

ಸಿಂದಗಿ: ನಗರದ ಮಾಂಗಲ್ಯಭವನದಲ್ಲಿ ಎಚ್.ಟಿ.ಕುಲಕರ್ಣಿ ಪ್ರತಿಷ್ಠಾನದ ವತಿಯಿಂದ ದಿವಂಗತ ಎಚ್.ಟಿ.ಕುಲಕರ್ಣಿ ಅವರ ಗುರುಸ್ಮರಣೆಯೊಂದಿಗೆ ದೇಹದಾನ, ರಕ್ತದಾನ ಶಿಬಿರವನ್ನು ಸೆಪ್ಟೆಂಬರ್ 6 ರಂದು ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯಕ್ರಮದ ಆಯೋಜಕ ವಿಜಯಪುರ ಜಿಲ್ಲಾ ಕೈಗಾರಿಕಾ ಇಲಾಖೆ ಉಪನಿರ್ದೇಶಕ ಸುಭಾಸ ಪಾಟೀಲ ಹೇಳಿದರು. ನಗರದ ಬಸವ ಮಂಟಪದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಸ್. ಮಲ್ಲೇದ, ಗುರುರಾಜ ಪಡಶೆಟ್ಟಿ, ಶೈಲಜಾ ಸ್ಥಾವರಮಠ, ಮಹಾಂತೇಶ ನೂಲಾನವರ ಮಾತನಾಡಿದರು. ತಾಲ್ಲೂಕು ಶಿಕ್ಷಣ ಪ್ರಸಾರಕ ಮಂಡಳಿಯ ಕಾನೂನು ಕಾಲೇಜು ಪ್ರಾಚಾರ್ಯ ನಾನಾಗೌಡ ಸಾವಳಗಿ, ಉಪನ್ಯಾಸಕ ಗೌರೀಶ ಹೈಯಾಳಕರ, ಮಹಾಂತೇಶ ಇದ್ದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.